# ಹಂಪಿ ಟೈಮ್ಸ್

HAMPI TIMES

ಕನ್ನಡ ದಿನಪತ್ರಿಕೆ
KANNADA DAILY

ಸಂಪಾದಕ: ಬಸಾಪುರ ಬಸವರಾಜ
EDITOR: BASAPUR BASAVARAJA

epaper.hampitimes.com | e-mail: hampitimes@gmail.com | M:94486 33038

ಸಂಪುಟ:02 • ಸಂಚಿಕೆ: 95 • ಪಿ.ಆರ್.ಜಿ.ಐ.ನಂ.:KARKAN/2023/88055 • ವಿಜಯನಗರ • 09.10.2024 • ಬುಧವಾರ • ಪುಟ:04 • ಬೆಲೆ:2
Volume:02 • Issue: 95 • PRGI No:KARKAN/2023/88055 • VIJAYANAGARA • 09.10.2024 • Wednesday • Page:04 • Rs:2



HAMPI TIMES No.1 Leading Local News Paper
90,000 E-PAPER READERS
94486 33038 NEWS PAPER ADD - THE BEST ADVERTISING PLATFORM TO BOOST YOUR BUSINESS
E-mail: hampitimes@gmail.com | # Valmiki Circle hospet-583201



ಶ್ರೀಕರಿ ಆಸ್ಪತ್ರೆ SRIKARII HOSPITAL

Srikarii Hospital

Facility Available

ಅಲ್ಟ್ರಾ ಸೌಂಡ್ ULTRA SOUND | ಸಾಮಾನ್ಯ ಹೆರಿಗೆ Normal Delivery | ಗರ್ಭಕಂಠ Hysterectomy | ಲ್ಯಾಪರೋಸ್ಕೋಪಿ Laparoscopy | ಸಿಸೇರಿಯನ್ ವಿಭಾಗ Cesarean Section

ಪ್ರಸೂತಿ ತೊಂದರೆ Gynecological Problem | ಹೆಚ್ಚಿನ ಅಪಾಯದ ಗರ್ಭಧಾರಣೆ High Risk Pregnancy | ಬಂಜೆತನ ಚಿಕಿತ್ಸೆ Infertility Treatment | ಸುಸಜ್ಜಿತ IUI ಪ್ರಯೋಗಾಲಯ Highly Equipped IUI Lab

Dr. Gangothri S
MBBS DNB OBG
Dip in IVF and reproductive medicine
Fellowship in cosmetic gynaecology and regenerative medicine



4TH WARD PATEL NAGAR HOSAPETE-583201, 08394-221456-7619476999
24 HRS Emergency Obstetrics Care
Best IVF centre



**ಸುದ್ದಿ, ಜಾಹೀರಾತು ಕಚೇರಿ**

ವಿಜಯನಗರ ಜಿಲ್ಲೆಯ ಸುದ್ದಿ ಜಾಹೀರಾತು ಪ್ರಕಟಣೆಗಾಗಿ ಈ ಕೆಳಗಿನ ಕಚೇರಿ ವಿಳಾಸ ಸಂಪರ್ಕಿಸಿ

**ಹಂಪಿ ಟೈಮ್ಸ್**
ವಾಲ್ಮೀಕಿ ಸರ್ಕಲ್ ಹತ್ತಿರ, ಹೊಸಪೇಟೆ, ವಿಜಯನಗರ ಜಿಲ್ಲೆ.

94486 33038
Email: hampitimes@gmail.com


# ಬಿಪಿ ಶುಗರ್ ಕಾಯಿಲೆ ನಿಯಂತ್ರಣಕ್ಕೆ ಜೀವನ ಶೈಲಿ ಬದಲಾವಣೆ ಅಗತ್ಯ

## ಡಿಎಚ್‌ಓ ಡಾ.ಯಲ್ಲಾ ರಮೇಶಬಾಬು ಸಲಹೆ | ವೈದ್ಯರ ಮಾರ್ಗದರ್ಶನ ಪಡೆಯಿರಿ

■ **ಹಂಪಿ ಟೈಮಸ್ ಬಳ್ಳಾರಿ**

ಜೀವನ ಶೈಲಿಯ ರೋಗಗಳಾದ ರಕ್ತದೊತ್ತಡ, ಸಕ್ಕರೆ ಕಾಯಿಲೆಯನ್ನು ಒಮ್ಮೆ ಗುರುತಿಸಿದ ನಂತರ ವೈದ್ಯರ ಸಲಹೆ ಮೇರೆಗೆ ನಿಯಮಿತವಾಗಿ ಔಷಧಿ ಸೇವಿಸುವ ಮೂಲಕ ಸದೃಢ ಆರೋಗ್ಯ ತಮ್ಮದಾಗಿಸಿಕೊಳ್ಳಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶಬಾಬು ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಅಸಾಂಕ್ರಾಮಿಕ ರೋಗಗಳ ನಿಯಂತ್ರಣ ಘಟಕ ಇವರ ಆಶ್ರಯದಲ್ಲಿ ತೋರಣಗಲ್ಲಿನ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಮಂಗಳವಾರ ಆಯೋಜಿಸಿದ್ದ ಆಯುಷ್ಮಾನ ಆರೋಗ್ಯ ತಪಾಸಣಾ ಶಿಬಿರದಲ್ಲಿ ಅವರು ಮಾತನಾಡಿದರು.

ತಜ್ಞವೈದ್ಯರಿಂದ ಒಂದು ಸಮುದಾಯ ಆರೋಗ್ಯ ಕೇಂದ್ರದಲ್ಲಿ ಹಾಗೂ ಉಳಿದ ಎಲ್ಲ ಆರೋಗ್ಯ ಕೇಂದ್ರಗಳಲ್ಲಿ ಪ್ರತಿ ಮಂಗಳವಾರದಂದು ಸ್ಥಳೀಯ ವೈದ್ಯರಿಂದ ತಪಾಸಣೆ ಮಾಡುವ ಕಾರ್ಯ ಕೈಗೊಳ್ಳಲಾಗುತ್ತಿದ್ದು, ಇದರ ಸದುಪಯೋಗ ಪಡೆಯಬೇಕು ಎಂದು ತಿಳಿಸಿದರು.

ಪ್ರಸ್ತುತ ಆಸ್ಪತ್ರೆಗಳಿಗೆ ತಪಾಸಣೆಗೆ ಆಗಮಿಸುವ ಪ್ರತಿಯೊಬ್ಬರಿಗೂ ಔಷದೋಪಚಾರದ ಬಗ್ಗೆ ಸೂಕ್ತ ಮಾರ್ಗದರ್ಶನ ನೀಡಲು 10–15 ಜನರ ಗುಂಪು ಮಾಡಿ ಜೀವನ ಶೈಲಿಯ ಬದಲಾವಣೆಯ ಕುರಿತು ಆಪ್ತಸಮಾಲೋಚನೆ ನೀಡಲಾಗುತ್ತದೆ ಎಂದರು.

ಜಿಲ್ಲಾ ಮಾನಸಿಕ ಕಾರ್ಯಕ್ರಮಾಧಿಕಾರಿ ಡಾ.ವಿರೇಂದ್ರಕುಮಾರ ಅವರು ಮಾತನಾಡಿ, ಹಲವು ವರ್ಷಗಳಿಂದ ಇರುವ ನರ ಮತ್ತು ಚರ್ಮದ ಖಾಯಿಲೆಯಾಗಿರುವ ಕುಷ್ಠರೋಗವನ್ನು ಆರಂಭದಲ್ಲಿ ಗುರ್ತಿಸಿ ಚಿಕಿತ್ಸೆ ನೀಡಲಾಗುತ್ತಿದೆ, ಸ್ಪರ್ಶಜ್ಞಾನವಿಲ್ಲದ ತಿಳಿಬಿಳಿ ತಾಮ್ರವರ್ಣದ ಮಚ್ಚೆಗಳಿದ್ದಲ್ಲಿ ತಪ್ಪದೇ ಪರೀಕ್ಷೆ ಮಾಡಿಸಬೇಕು. ಮಾನಸಿಕ ಆರೋಗ್ಯಕ್ಕಾಗಿ ಉಚಿತ ಸಹಾಯವಾಣಿ 14416 ಟೆಲಿಮನಸ್‌ಗೆ ಕರೆ ಮಾಡಿ ಸದುಪಯೋಗ ಪಡೆಯಬೇಕು ಎಂದರು.

ತಪಾಸಣೆ ಶಿಬಿರದಲ್ಲಿ ವಿಮ್ಸ್‌ನಿಂದ ಆಗಮಿಸಿದ ಎಲುಬು ಕೀಲು, ಸರ್ಜರಿ, ಚರ್ಮರೋಗ ತಜ್ಞವೈದ್ಯರಾದ ಡಾ.ರಘು ವೀರ, ಡಾ.ಪ್ರಜ್ವಲ್, ಡಾ.ಅತೀರಾ ಹಾಗೂ ಡಾ.ಮಣಿಕಂಠ, ಡಾ.ಶ್ರಾವಣಿ, ಡಾ.ಆರುಂಧತಿ ಅವರ ತಂಡವು ಸೇರಿ 153 ಜನರ ಆರೋಗ್ಯ ತಪಾಸಣೆ ಮಾಡಿದರು.

ತೋರಣಗಲ್ಲು ಸಮುದಾಯ ಆರೋಗ್ಯ ಕೇಂದ್ರದ ಆಡಳಿತ ವೈದ್ಯಾಧಿಕಾರಿ ಡಾ.ಗೋಪಾಲರಾವ್, ಶುಶ್ರುಷಣಾ ಧಿಕಾರಿ ಮಾರೇಶ, ರೇಷ್ಮಾ ಸೇರಿದಂತೆ ವೈದ್ಯರ ತಂಡ, ಸಾರ್ವಜನಿಕರು ಹಾಗೂ ಇತರರು ಉಪಸ್ಥಿತರಿದ್ದರು.

# ಅಖಿಲ ಭಾರತ ವೀರಶೈವ ಮಹಾಸಭಾ ಜಿಲ್ಲಾ ತಾಲೂಕು ಘಟಕಕ್ಕೆ ಪದಾಧಿಕಾರಿಗಳ ಆಯ್ಕೆ

## ವಿಜಯನಗರ ಜಿಲ್ಲಾ, ಹೊಸಪೇಟೆ ತಾಲೂಕು ಘಟಕ ನೂತನ ಪದಾಧಿಕಾರಿಗಳ ಘೋಷಣೆ

■ **ಹಂಪಿ ಟೈಮ್ಸ್ ಹೊಸಪೇಟೆ**



ಅಖಿಲ ಭಾರತ ವೀರಶೈವ ಮಹಾಸಭಾ(ರಿ) ಬೆಂಗಳೂರು, ವಿಜಯನಗರ ಜಿಲ್ಲಾ ಘಟಕ ಮತ್ತು ಹೊಸಪೇಟೆ ತಾಲೂಕು ಘಟಕದ ನೂತನ ಪದಾಧಿಕಾರಿಗಳು ಸಮಾಜ ಸಂಘಟನೆಯಲ್ಲಿ ಸಕ್ರಿಯವಾಗಿ ತೊಡಗಸಿಕೊಂಡು ಸಮಾಜ ಅಭಿವೃದ್ಧಿಗೆ ಶ್ರಮಿಸಬೇಕು ಎಂದು ಅಖಿಲ ಭಾರತ ವೀರಶೈವ ಮಹಾಸಭಾದ ರಾಜ್ಯ ಕಾರ್ಯದರ್ಶಿ ಕೆ.ಬಿ.ಶ್ರೀನಿವಾಸ ರೆಡ್ಡಿ ಹೇಳಿದರು.

ನಗರದ ಶ್ರೀ ಕೊಟ್ಟೂರುಸ್ವಾಮಿ ಸಂಸ್ಥಾನ ಮಠದಲ್ಲಿ ಭಾನುವಾರ ನೂತನವಾಗಿ ಆಯ್ಕೆಯಾದ ಜಿಲ್ಲಾ ಹಾಗೂ ತಾಲೂಕು ಘಟಕದ ಪದಾಧಿಕಾರಿಗಳ ಅಧಿಕೃತ ಘೋಷಣಾ ಸಭೆಯಲ್ಲಿ ಮಾತನಾಡಿದರು. ನೂತನವಾಗಿ ಆಯ್ಕೆಯಾದವರ ಸೇವಾ ಅವಧಿ ಐದು ವರ್ಷಗಳದ್ದಾಗಿದೆ. ಜಿಲ್ಲೆಯ ಪ್ರತಿಯೊಬ್ಬ ಪದಾಧಿಕಾರಿಗಳು, ಸದಸ್ಯರು ಸಮಾಜದ ಜನರ ನಿರೀಕ್ಷೆಗಳನ್ನು ಸಾಕಾರಗೊಳಿಸುವ ನಿಟ್ಟಿನಲ್ಲಿ ಯೋಜನಾಬದ್ಧವಾಗಿ ಕಾರ್ಯನಿರ್ವಹಿಸಿ ಸಮಾಜದ ಪ್ರಶಂಸೆಗೆ ಪಾತ್ರರಾಗಬೇಕು ಎಂದರು.

**ವಿಜಯನಗರ ಜಿಲ್ಲಾ ಘಟಕದ ಪದಾಧಿಕಾರಿಗಳು:** ಪೂಜ್ಯ ಜಗದ್ಗುರು ಕೊಟ್ಟೂರು ಬಸವಲಿಂಗ ಮಹಾಸ್ವಾಮಿಗಳು (ಗೌರವಾಧ್ಯಕ್ಷರು), ಐ.ಎನ್.ಸಂಗನಬಸಪ್ಪ (ಅಧ್ಯಕ್ಷರು), ಗುರುಸಿದ್ದನಗೌಡ್ರು, ಕಲಿವೀರಪ್ಪ ಉದಾಸಿ, ಡಿ.ಶಶಿಕಲಾ (ಉಪಾಧ್ಯಕ್ಷರು), ಚಂದ್ರಶೇಖರ.ಕೆ (ಪ್ರಧಾನ ಕಾರ್ಯದರ್ಶಿ), ಪಂಪಾಪತಿ ಎನ್.ಎಂ.(ಕೋಶಾಧ್ಯಕ್ಷರು), ಶಿವರುದ್ರಪ್ಪ ಮುದೋಳ್ (ಕಾರ್ಯದರ್ಶಿ), ಕೆ.ಸುಮಾ, ಡಾ.ಶಿವಶಂಕರ ಟಿ.ಎಂ. (ಕಾರ್ಯದರ್ಶಿ)ಯಾಗಿ ಆಯ್ಕೆಯಾಗಿದ್ದರೆ.

**ಹೊಸಪೇಟೆ ತಾಲೂಕು ಘಟಕದ ಪದಾಧಿಕಾರಿಗಳು:** ಎಸ್.ಎಂ.ರವಿಕಾಂತ (ಅಧ್ಯಕ್ಷರು), ಹೆಚ್. ಶ್ರೀನಿವಾಸ, ಎಲ್.ಎಮ್.ಸುಮಾ (ಉಪಾಧ್ಯಕ್ಷರು), ಕೆ.ಎಂ.ಮಹೇಶ (ಪ್ರಧಾನ ಕಾರ್ಯದರ್ಶಿ), ಸುನಿಲ್ ಅನ್ನಿ (ಕೋಶಾಧ್ಯಕ್ಷರು), ಎ.ಎಂ.ಬಸವರಾಜ, ಜಿ.ವೀಣಾ (ಕಾರ್ಯದರ್ಶಿ) ಆಯ್ಕೆಯಾಗಿದ್ದಾರೆ ಎಂದು ಸಹಾಯಕ ಚುನಾವಣಾಧಿಕಾರಿ ಎಚ್.ಎಂ.ಚಂದ್ರಶೇಖರ ಶಾಸ್ತ್ರಿ ತಿಳಿಸಿದ್ದಾರೆ.

**ಮೈಕ್ರೋ ನ್ಯೂಸ್**

## ಜಾಗೃತಿ ಮತ್ತು ಉಸ್ತುವಾರಿ ಸಮಿತಿ : ಸದಸ್ಯರ ನೇಮಕ್ಕಾಗಿ ಅರ್ಜಿ ಆಹ್ವಾನ

**ಹಂಪಿ ಟೈಮ್ಸ್ ಹೊಸಪೇಟೆ**

ಸಮಾಜ ಕಲ್ಯಾಣ ಇಲಾಖೆಯಿಂದ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ (ದೌರ್ಜನ್ಯ ನಿಯಂತ್ರಣ) ನಿಯಮಗಳು 1995ರ ನಿಯಮ 17ರ ಉಪ–ವಿಭಾಗ ಮಟ್ಟದ ಜಾಗೃತಿ ಮತ್ತು ಉಸ್ತುವಾರಿ ಸಮಿತಿಗೆ ಸದಸ್ಯರನ್ನು ನೇಮಕ ಮಾಡಲು ಆಸಕ್ತರಿಂದ ಅರ್ಜಿ ಆಹ್ವಾನಿಸಲಾಗಿದೆ.

ಹೊಸಪೇಟೆ ಜಾಗೃತಿ ಮತ್ತು ಉಸ್ತುವಾರಿ ಸಮಿತಿಗೆ 3 ವರ್ಷಗಳಿಗೆ ಸಿಮಿತಗೊಳಿಸಿ ಸದಸ್ಯರನ್ನು ಆಯ್ಕೆ ಮಾಡಲಾಗುವುದು. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಕ್ಕೆ ಸೇರಿದ ಇಬ್ಬರು ಅಧಿಕಾರೇತರ ಸದಸ್ಯರು ಮತ್ತು ಇತರ ವರ್ಗದ ಇಬ್ಬರು ಎನ್.ಜಿ.ಓ ಅಧಿಕಾರೇತರ ಸದಸ್ಯರನ್ನು ಉಪ– ವಿಭಾಗಾಧಿಕಾರಿಗಳು ನಾಮ ನಿರ್ದೇಶನ ಮಾಡುವರು. ಆಸಕ್ತರು ತಮ್ಮ ಸ್ವ ವಿವರಗಳೊಂದಿಗೆ ದ್ವಿಪ್ರತಿಯಲ್ಲಿ ಅಕ್ಟೋಬರ್ 25ರ ಒಳಗಾಗಿ ಸಮಾಜ ಕಲ್ಯಾಣ ಇಲಾಖೆ ಕಚೇರಿಗೆ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಹೊಸಪೇಟೆ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು (ಗ್ರೇಡ್–1) ಇವರನ್ನು ಕಚೇರಿ ಸಮಯದಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

# ಹಳ್ಳದ ನೀರಿನಲ್ಲಿ ಮುಳುಗಿ ಮೂವರು ಬಾಲಕರ ಸಾವು

## ಕುಮತಿ ಗ್ರಾಮದಲ್ಲಿ ಅವಘಡ, ಮುಗಿಲು ಮುಟ್ಟಿದ ಕುಟುಂಬಸ್ಥರ ಆಕ್ರಂದನ | ಸ್ಥಳಕ್ಕೆ ಎಸ್ಪಿ ಶ್ರೀಹರಿಬಾಬು ಭೇಟಿ

■ **ಹಂಪಿ ಟೈಮ್ಸ್ ಕಾನಹೊಸಹಳ್ಳಿ**

ಹಳ್ಳದ ಆಳ ಅರಿಯದೆ ನೀರಿಗಿಳಿದು ಈಜಾಡುವಾಗ ಕೇಸರಲಿ ಸಿಲುಕ್ಕಿ ಮೂವರು ಬಾಲಕರು ಮೃತಪಟ್ಟಿರುವ ಧಾರುಣ ಘಟನೆ ಮಂಗಳವಾರ ಮಧ್ಯಾಹ್ನ ಕಾನಹೊಸಹಳ್ಳಿ ಸಮೀಪದ ಕುಮತಿ ಗ್ರಾಮದಲ್ಲಿ ಜರುಗಿದ್ದು, ಇಡೀ ಗ್ರಾಮದ ಜನರ ಆಕ್ರಂಧನ ಮುಗಿಲು ಮುಟ್ಟಿದೆ.

ಮೃತ ಬಾಲಕರು ಸಾಗರ(14) ಮತ್ತು ಗುರು (14) 8ನೇ ತರಗತಿ ಓದುತ್ತಿದ್ದರು. ವಿನಯ(11) 6ನೇ ತರಗತಿ ವ್ಯಾಸಂಗ ಮಾಡುತ್ತಿದ್ದರು. ದಸರಾ ರಜೆ ಇರುವುದರಿಂದ ಬಾಲಕರು ಶಾಲೆ ಇಲ್ಲದ ಕಾರಣ ಮತ್ತು ಕಳೆದ ಎರಡು ದಿನಗಳಿಂದ ಚಿನ್ನಹಗರಿ ಉಪನದಿ ತುಂಬಿ ಹರಿದ ಪರಿಣಾಮ ಹಳ್ಳದಲ್ಲಿ ನೀರು ತುಂಬಿದ್ದು ಬಾಲಕರು ಮಂಗಳವಾರ ಈಜಾಡಲು ಹಳ್ಳಕ್ಕೆ ಹೋಗಿದ್ದಾರೆ. ನೀರಿನ ಆಳ ಅರಿಯದ ಬಾಲಕರು ನೀರಿಗಿಳಿದು ಈಜುತ್ತಿರುವಾಗ ಆಕಸ್ಮಿಕವಾಗಿ ಕೇಸರಿನಲ್ಲಿ ಸಿಲುಕಿ ಮೃತಪಟ್ಟಿದ್ದಾರೆ. ಬಹಳ ಸಮಯವಾದರು ಬಾಲಕರು ಮನೆಗೆ ಬಾರದೆ ಇರುವಾಗ ಪಾಲಕರು ಹಳ್ಳದಕಡೇ ಹೋಗಿರಬಹುದೆಂದು ತಿಳಿದು, ಹಳ್ಳದ ಕಡೆಗೆ ಹೋಗಿ ಹುಡಕಲಾಗಿ ಹಳ್ಳದಲ್ಲಿ ಮೂವರು ಬಾಲಕರು ನೀರಿನಲ್ಲಿ ಮುಳುಗಿ ಮೃತಪಟ್ಟಿರುವುದು ಗೋತ್ತಾಗಿದೆ.

**ಪಾಲಕರ ಆಕ್ರಂದನ :** ಕುಮತಿ ಗ್ರಾಮದಲ್ಲಿ ಮೂವರು ಬಾಲಕರು ನೀರಿನಲ್ಲಿ ಮುಳುಗಿ ಮೃತಪಟ್ಟಿರುವ ವಿಷಯ ಪಾಲಕರಿಗೆ ತಿಳಿದ ಕೂಡಲೇ ಕುಟುಂಬಸ್ಥರ ರೋಧನ ಮುಗಿಲುಮಟ್ಟಿದ್ದು ಮಾತ್ರವಲ್ಲ ಇಡೀ ಗ್ರಾಮದ ಜನರು ಶೋಕ ಆವರಿಸಿದೆ. ಮುದ್ದ ಕಂದಗಳ ಸಾವಿಗೆ ಪ್ರತಿಯೊಬ್ಬರು ಕಣ್ಣೀರು ಹಾಕುತ್ತಿರುವ ದೃಶ್ಯ ಎಂಥವರಿಗೂ ದು:ಖ ತರುವಂತಿತ್ತು.

**ಶಾಸಕರು, ಎಸ್ಪಿ ಭೇಟಿ :** ನೀರಿನಲ್ಲಿ ಬಾಲಕರು ಮುಳುಗಿ ಮೃತಪಟ್ಟಿರುವ ಘಟನೆ ಮಾಹಿತಿ ತಿಳಿದ ಕೂಡಲೆ ಕೂಡ್ಲಿಗಿ ಶಾಸಕ ಡಾ.ಎನ್.ಟಿ.ಶ್ರೀನಿವಾಸ್ ಹಾಗೂ ವಿಜಯನಗರ ಎಸ್ಪಿ ಶ್ರೀಹರಿಬಾಬು ರಾತ್ರಿ 7 ಗಂಟೆ ಕುಮತಿ ಗ್ರಾಮಕ್ಕೆ ಭೇಟಿ ಹೆತ್ತವರಿಗೆ ಸಾಂತ್ವಾನ ಹೇಳಿದರು. ಡಿವೈಎಸ್ಪಿ ಮಲೇಶಪ್ಪ ಮಲಾಪುರೆ, ಕೊಟ್ಟೂರು ಸಿಪಿಐ ವೆಂಕಟೇಶಸ್ವಾಮಿ, ಕಾನಹೊಸಹಳ್ಳಿ ಪಿಎಸ್ಐ ಸಿದ್ದರಾಮ ಬಿದರಾಣಿ ಇದ್ದರು.

# ಪಾರ್ವತಿ ದೇವಿಗೆ ವಿಶೇಷ ಅಲಂಕಾರ

■ **ಹಂಪಿ ಟೈಮ್ಸ್ ಕೊಟ್ಟೂರು**



ನವರಾತ್ರಿ ಹಬ್ಬದ ಪ್ರಯುಕ್ತ ಪಟ್ಟಣದ ಅಗಡೇರ ಓಣಿಯಲ್ಲಿನ ಶ್ರೀ ಪಾರ್ವತಿ ದೇವಿಗೆ ಆರನೇ ದಿನ ವಿವಿಧ ಪುಷ್ಪಗಳಿಂದ ವಿಶೇಷವಾಗಿ ಅಲಂಕರಿಸಲಾಗಿತ್ತು.

ದೇವಿಯ ದರ್ಶನಕ್ಕೆವಿಶೇಷವಾಗಿ ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ಬಾಗಿಗಳಾಗಿ ಧರ್ಶನ ಪಡೆದರು. ಪ್ರತಿವರ್ಷದಂತೆ ದೇವಸ್ಥಾನ ದಲ್ಲಿ ದೇವಿ ಪುರಾಣ ವನ್ನು ಏರ್ಪಡಿಸಲಾಸಗಿದ್ದು ಏನ್. ಎಂ ಪ್ರಾಣಲಿಂಗಸ್ವಾಮಿ, ಜಂಬೂರ್ ಕುಮಾರಸ್ವಾಮಿ ದೇವಿಯ ಪುರಾಣವನ್ನು ಓದಿ ದರು.

ಈ ಸಂದರ್ಭದಲ್ಲಿ ದೇವಿಗೆ ಪುಷ್ಪ ಅಲಂಕಾರ ಮಾಡಿಸಿದ್ದ ಅಗಡಿ ಪ್ರಭಾಕರ, ಹೊನ್ನಮ್ಮ ದಂಪತಿಗಳಿಗೆ ಆಡಳಿತ ವರ್ಗದಿಂದ ಸನ್ಮಾನಿಸಲಾಯಿತು. ನಂತರ ನೆರೆದಿದ್ದ ಭಕ್ತರಿಗೆ ಪ್ರಸಾದ ವಿತರಿಸಲಾಯಿತು. ದೇವಸ್ಥಾನದ ಆಡಳಿತ ವರ್ಗದ ಗೌರವ ಅಧ್ಯಕ್ಷ ಎ ಹೆಚ್. ಎಂ.ಷಡಕ್ಷರಯ್ಯ,ಕಾರ್ಯದರ್ಶಿ ಸಿದ್ದಯ್ಯ ಸದಶ್ಯರಾದ ಅಡಕಿ. ಮಂಜುನಾಥ, ಎ.ಅಮರೇಶ್, ಎಸ್. ಕೊಟ್ರೇಶ್ ಪ್ರಾಣಲಿಂಗ, ಎಂ ಗಿರೀಶ ಇತರರು ಇದ್ದರು.

## ವಿವಿಧ ಯೋಜನೆಗಳ ಸೌಲಭ್ಯಕ್ಕಾಗಿ ಅರ್ಜಿ ಆಹ್ವಾನ

**ಹಂಪಿ ಟೈಮ್ಸ್ ಹೊಸಪೇಟೆ**

ಡಾ॥ ಬಾಬು ಜಗಜೀವನ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದಿಂದ 2024–25ನೇ ಸಾಲಿನಲ್ಲಿ ಅನುಷ್ಠಾನಗೊಳಿಸುತ್ತಿರುವ ವಿವಿಧ ಯೋಜನೆಗಳ ಸೌಲಭ್ಯ ಪಡೆಯಲು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಸಲು ಅಕ್ಟೋಬರ್ 30 ಕೊನೆಯದಿನಾಂಕ ಆಗಿರುತ್ತದೆ.

ಚರ್ಮ ಕುಶಲಾಕರ್ಮಿ ಕುಟುಂಬಗಳ ತರಬೇತಿ ಪಡೆಯಲು ಅಧ್ಯಾಯನ ಪ್ರವಾಸ, ಮಾನವ ಸಂಪನ್ಮೂಲ ಅಭಿವೃದ್ಧಿ ಮತ್ತು ಕೌಶಲ್ಯಾಭಿವೃದ್ಧಿ ಯೋಜನೆಯಡಿ ಮೂರು ವರ್ಷಗಳ ಡಿಪ್ಲಮೋ ಇನ್ >>4

# ಯುವನಿಧಿಗೆ ಪ್ರತಿ ತಿಂಗಳು ಸ್ವಯಂ ಘೋಷಣೆ ಪ್ರಮಾಣ ಪತ್ರ ಕಡ್ಡಾಯ

■ **ಹಂಪಿ ಟೈಮ್ಸ್ ಕೊಪ್ಪಳ**

ಜಿಲ್ಲೆಯಲ್ಲಿ ಯುವನಿಧಿ ಯೋಜನೆಯಡಿ ನೋಂದಾಯಿಸಿಕೊಂಡಿರುವ ಫಲಾನುಭವಿಗಳು, ಯೋಜನೆಯ ಸೌಲಭ್ಯ ಪಡೆಯಲು ಪ್ರತಿ ತಿಂಗಳು ತಾವು ವ್ಯಾಸಂಗ ಮಾಡುತ್ತಿಲ್ಲ, ಸ್ವಯಂ ಉದ್ಯೋಗಿಯಲ್ಲ, ನಿರುದ್ಯೋಗಿ ಎಂದು ಸ್ವಯಂ ಘೋಷಣೆ ಪ್ರಮಾಣ ಪತ್ರ ಕಡ್ಡಾಯವಾಗಿ ಸಲ್ಲಿಸಬೇಕು ಎಂದು ಜಿಲ್ಲಾ ಉದ್ಯೋಗಾಧಿಕಾರಿಗಳು ತಿಳಿಸಿದ್ದಾರೆ.

2022–23 ಮತ್ತು 2023–24 ನೇ ಸಲಿನಲ್ಲಿ ಪದವಿ, ಸ್ನಾತಕೊತ್ತರ ಪದವಿ ಮತ್ತು ಡಿಪ್ಲೋಮಾ ವ್ಯಾಸಂಗ ಮಾಡಿ 2023, 2024ರಲ್ಲಿ ತೇರ್ಗಡೆಯಾಗಿ ಅರ್ಹತೆ ಹೊಂದಿದ ಅಭ್ಯರ್ಥಿಗಳು ಈಗಾಗಲೇ ಸೇವಾ ಸಿಂಧು ಪೋರ್ಟಲ್‌ನಲ್ಲಿ ನೋಂದಣಿಯಾಗಿದ್ದು, ಫಲಿತಾಂಶದ ನಂತರ ನಿರುದ್ಯೋಗಿಗಳಾದ 180 ದಿನಗಳು ಪೂರೈಸಿದ ಅಭ್ಯರ್ಥಿಗಳಿಗೆ ನೇರ ನಗದು ವರ್ಗಾವಣೆ ಮಾಡಲಾಗಿರುತ್ತದೆ. ಈ ಪ್ರಯೋಜನ ಪಡೆಯಬೇಕಿದ್ದರೆ, ಪ್ರತಿ ತಿಂಗಳಲ್ಲಿ ತಾನು ನಿರುದ್ಯೋಗಿಯೆಂದು, ವ್ಯಾಸಂಗ ಮುಂದುವರೆಸುತ್ತಿಲ್ಲವೆಂದು ಹಾಗೂ ಸ್ವಯಂ ಉದ್ಯೋಗಿಯಲ್ಲವೆಂದು ಸ್ವಯಂ ಘೋಷಣೆ ಮಾಡಬೇಕಾಗಿರುತ್ತದೆ.

ಪ್ರಯೋಜನ ಪಡೆಯುತ್ತಿರುವ ಅಭ್ಯರ್ಥಿಗಳು ಪ್ರತಿ ತಿಂಗಳು 25 ನೇ ದಿನಾಂಕದೊಳಗಾಗಿ ಸ್ವಯಂ ಘೋಷಣೆ ಮಾಡದಿದ್ದಲ್ಲಿ ಅಂತಹ ಅಭ್ಯರ್ಥಿಗಳಿಗೆ ನೇರ ನಗದು ವರ್ಗಾವಣೆ ಮಾಡಲಾಗುವುದಿಲ್ಲ. ಈಗಾಗಲೇ ನೋಂದಾಯಿಸಿಕೊಂಡ ಅಭ್ಯರ್ಥಿಗಳಿಗೆ ನೇರ ನಗದು ವರ್ಗಾವಣೆ ಮಾಡಲಾಗಿದ್ದು, ಮುಂದಿನ ತಿಂಗಳ ಪ್ರಯೋಜನ ಪಡೆದುಕೊಳ್ಳಲು ಸ್ವಯಂ ಘೋಷಣೆ ಮಾಡಬೇಕಾಗಿರುವ ಕುರಿತು ಫಲಾನುಭವಿಗಳಿಗೆ ಎಸ್‌ಎಂಎಸ್ ಮೂಲಕ ಸಂದೇಶ ರವಾನಿಸಲಾಗುತ್ತದೆ. ಅಭ್ಯರ್ಥಿಗಳು ಕಡ್ಡಾಯವಾಗಿ ಆಧಾರ್ ಸೀಡೆಡ್ ಬ್ಯಾಂಕ್ ಖಾತೆಯನ್ನು ಹೊಂದಿರಬೇಕು. ಫಲಾನುಭವಿಗಳು ಯುವ ನಿಧಿ ಯೋಜನೆಯ ಸ್ವಯಂ ಘೋಷಣೆ ಮಾಡಿಕೊಳ್ಳಲು https://sevasindhugs.karnataka.gov.in/ ವೆಬ್‌ಸೈಟ್‌ಗೆ ಭೇಟಿ ನೀಡಬಹುದು ಎಂದು ತಿಳಿಸಿದ್ದಾರೆ.


14 ಭಾಷೆ ಈಗ ನಿಮ್ಮ ಮಾತೃಭಾಷೆಯಲ್ಲಿ ಸುದ್ದಿ, ಲೇಖನ ಓದಿರಿ... www.hampitimes.com



ನಿಮ್ಮ ಸಂಸ್ಥೆಯ ಬ್ರ್ಯಾಂಡಿಂಗ್, ಉತ್ಪನ್ನ, ಸೇವೆಗಳ ಪ್ರಚಾರಕ್ಕಾಗಿ ಆಲೋಚಿಸುತ್ತಿದ್ದೀರಾ ?

HAMPI TIMES VIJAYANAGARA

ನಂ 1 ಜಿಲ್ಲಾಮಟ್ಟದ ದಿನಪತ್ರಿಕೆ

ಚಿಕ್ಕ ಮೊತ್ತ ದೊಡ್ಡ ಜಾಹೀರಾತು

ಸ್ಥಳೀಯ ಹಾಗೂ ವ್ಯಾಪಕ ಮಟ್ಟದಲ್ಲಿ ಜನಪ್ರಿಯ
90 ಸಾವಿರಕ್ಕೂ ಅಧಿಕ ಇ-ಪೇಪರ್ ಓದುಗರು
94486 33038 hampitimes@gmail.com

ಹಂಪಿ ಟೈಮ್ಸ್
ವಿಜಯನಗರದ ಹೆಮ್ಮೆ
ಪ್ರಿಂಟ್ & ಡಿಜಿಟಲ್ ದಿನಪತ್ರಿಕೆ
Print & Digital News Paper

ಹಂಪಿ ಟೈಮ್ಸ್ ಇ-ಪೇಪರ್

ಹಂಪಿ ಟೈಮ್ಸ್ ವಿಸ್ತಾರ : ಕರ್ನಾಟಕ, ಮಹರಾಷ್ಟ್ರ, ಕೇರಳ, ತೆಲಂಗಾಣ, ತಮಿಳುನಾಡು, ಆಂಧ್ರಪ್ರದೇಶ, ಉತ್ತರ ಪ್ರದೇಶ, ಗುಜರಾತ್, ಹರಿಯಾಣ, ರಾಜಸ್ಥಾನ & ಅಮೇರಿಕಾ, ಇಂಗ್ಲೆಂಡ್, ಕೆನಡಾ ಇತರೆ ರಾಷ್ಟ್ರಗಳಲ್ಲಿರುವ ಕನ್ನಡ ಓದುಗರ ಕೈಯಲ್ಲಿ ಹಂಪಿ ಟೈಮ್ಸ್ ಇ ಪೇಪರ್

## ಬೆಳಕಿನ ಹಾದಿ

# ನಿಜವಾದ ಮನುಜರು ಯಾರು?

■ ಜಯಶ್ರೀ.ಎಂ.ಕರ್ಜಗಿ. ಹುಬ್ಬಳ್ಳಿ



ಹಿಂದಿನ ಕಾಲದಲ್ಲಿ ಮದುವೆ ಆದ ಮೇಲೆ ಮೊದಲನೆ ಮಗು ಗಂಡು ಮಗು ಆಗಬೇಕೆಂದು ಹರಕೆ ಹೊತ್ತು ಹೆರುತ್ತಿದ್ದರು. ಆದರೆ ವಯಸ್ಸಾದ ಮೇಲೆ ತಂದೆ-ತಾಯಿಗೆ ಸ್ವಲ್ಪ ಹುಷಾರಿಲ್ಲ ಎಂದ ಕೂಡಲೇ ಮಗಳು ಗಂಡನ ಮನೆಯಿಂದ ನೋಡಲು ಬರುತ್ತಾಳೆಯೇ ಹೊರತು ಮಗನಲ್ಲ. ದುಡಿಮೆ ಹೆಸರಲ್ಲಿ ತಂದೆ ತಾಯಿಗಳಿಂದ ದೂರ ಇರುವ ಮಗ ಆರು ತಿಂಗಳಿಗೊಮ್ಮೆಯೋ ಅಥವಾ ವರ್ಷಕ್ಕೆ ಒಮ್ಮೆಯೋ ಬಂದು ಹೋಗುತ್ತಾನೆ. ಇದು ಕೇವಲ ಒಂದೆರಡು ಮನೆಗಳ ಕಥೆಯಲ್ಲ. ಬಹುತೇಕ ಮನೆಗಳ ವ್ಯಥೆ.

ತಂದೆ ತಾಯಿಗಳಾದ ನಾವು ನಮಗೆ ವಯಸ್ಸು ಇದ್ದಾಗ ಮಕ್ಕಳಿಗೋಸ್ಕರ ನಮ್ಮ ಜೀವನವನ್ನೇ ತೇಯ್ದು ಬದುಕುತ್ತೇವೆ. ಮಕ್ಕಳು ಬೆಳೆದು ದೊಡ್ಡವರಾದ ಮೇಲೆ ತಂದೆ-ತಾಯಿಗಳನ್ನು ನೋಡಿಕೊಳ್ಳುವುದು ಅವರ ಜವಾಬ್ದಾರಿ. ಆದರೆ ಇದನ್ನು ಮಕ್ಕಳು ಸರಿಯಾಗಿ ಅರ್ಥ ಮಾಡಿಕೊಳ್ಳುತ್ತಿಲ್ಲ. ತಮ್ಮ ಜವಾಬ್ದಾರಿಯಿಂದ ನುಣುಚಿಕೊಳ್ಳುತ್ತಿದ್ದಾರೆ.

ಇನ್ನು ಈಗಿನ ಸಂಬಂಧಿಗಳು ಹೇಗೆ ಎಂದರೆ ಸಮಯ ನೋಡಿಕೊಂಡು ಆಡಿಕೊಳ್ಳುವವರೇ ಹೆಚ್ಚು. ಎಲ್ಲಾ ಗೊತ್ತಿದ್ದೂ ಕೂಡಾ ಹಿರಿಯರೊಂದಿಗೆ ಮಾತನಾಡದೇ ಇರುವುದು ಅವರ ದುರಹಂಕಾರವನ್ನು ತೋರಿಸುತ್ತದೆ. ಜೀವನದಲ್ಲಿ ಕಾಲ ಯಾರ ಸ್ವತ್ತೂ ಅಲ್ಲ. ನೊಂದವರಿಗೂ, ನೋಯಿಸಿದವರಿಗೂ ಒಂದಲ್ಲ ಒಂದು ದಿನ ಮಾಡಿದ ಕರ್ಮಕ್ಕೆ ತಕ್ಕ ಪ್ರತಿಫಲ ಕಾದಿರುತ್ತದೆ. ನೋಯಿಸಿದವರಿಗೆ ಕೊಡಲಿ ಪೆಟ್ಟು ಬಿದ್ದರೆ, ನೊಂದವರಿಗೆ ದೇವರ ಅನುಗ್ರಹ ಇದ್ದೇ ಇರುತ್ತದೆ.

ಯಾರಿಗೆ ತಾವು ಅನಗತ್ಯ ಅಂತಾ ಅನಿಸುತ್ತೇವೆಯೋ ಅವರಿಂದ ನಾವು ದೂರ ಇರಬೇಕು. ಮರೆಯಬೇಕಾದುದನ್ನು ಮರೆಯದೇ ಇರುವುದು, ನೆನಪು ಇಟ್ಟುಕೊಳ್ಳಬೇಕಾದುದನ್ನು ಮರೆತುಬಿಡುವುದು ಇವೆರಡೂ ನಮ್ಮ ಜೀವನದ ನೆಮ್ಮದಿಯನ್ನು ಹಾಳು ಮಾಡುವ ವಿಚಾರಗಳು.

ಅಂತೆಯೇ ಸಂಭ್ರಮದ ಕಾಲದಲ್ಲಿ ಕಣ್ಣಿರು ಹಾಕಬಾರದು. ಕಷ್ಟಕಾಲದಲ್ಲಿ ಕೈ ಹಿಡಿದವರನ್ನು ಯಾವತ್ತಿಗೂ ಮರೆಯಬಾರದು. ಕೈಮೀರಿ ಹೋದದ್ದನ್ನು ನೆನಪಿಸಿಕೊಳ್ಳಬಾರದು. ನಮಗೆ ಒಳ್ಳೆಯದು ಆಗುತ್ತೆ ಅನ್ನೋ ನಂಬಿಕೆ ಇದ್ದರೆ ಸಾಕು. ಅಸಾಧ್ಯವಾದುದನ್ನು ಸಾಧ್ಯ ಮಾಡಬಹುದು. ಅಂತಹ ಸಾಮರ್ಥ್ಯವನ್ನು ದೇವರು ನಮಗೆ ದಯಪಾಲಿಸಿದ್ದಾನೆ. ಜೀವನದಲ್ಲಿ ಏಳು ಬೀಳುಗಳು ಸಹಜ. ಕೆಟ್ಟದ್ದರ ಬಗ್ಗೆ ಯೋಚಿಸುತ್ತಾ ಕುಳಿತರೆ ಮತ್ತಷ್ಟು ಕುಗ್ಗಿ ಹೋಗುತ್ತೇವೆ. ಬದುಕಿನಲ್ಲಿ ಆಶಾವಾದಿಯಾಗಿ ಇದ್ದರೆ ನಮ್ಮ ಜೀವನದ ಸುಂದರವಾಗಿರುತ್ತದೆ. ಕೆಲವೊಂದು ಸಂದರ್ಭದಲ್ಲಿ ನಮ್ಮನ್ನು ದಾಳವಾಗಿ ಉಪಯೋಗಿಸಿ ಕೊಳ್ಳುತ್ತಾರೆ. ಯಾವುದಕ್ಕೂ ತಲೆ ಕೆಡಿಸಿಕೊಳ್ಳದೇ ಜೀವಿಸಿದಾಗ ಬದುಕು ಸುಂದರವಾಗಿರುತ್ತದೆ. ಗೌರವ ಎನ್ನುವುದು ಹಣ, ಆಸ್ತಿ, ಅಂತಸ್ತು ನೋಡಿ ಪಡೆದುಕೊಳ್ಳುವುದಲ್ಲ. ನಮ್ಮ ಹತ್ತಿರ ಏನಿಲ್ಲವೆಂದರೂ ನಮ್ಮ ಮಾತಿಗೆ ಮರ್ಯಾದೆ ಗೌರವ ಯಾರು ಕೊಡುತ್ತಾರೋ ಅವರೇ ನಮ್ಮವರು. ಅದೇ ನಿಜವಾದ ಪ್ರೀತಿ. ಅಲ್ಲವೇ?. ಇದನ್ನ ಪ್ರತಿಯೊಬ್ಬರೂ ತಮ್ಮ ಜೀವನದಲ್ಲಿ ಅನುಸರಿಸಿಕೊಂಡು ಪಾಳಿಸಿದರೆ ಅವರೇ ನಿಜವಾಧ ಮನುಜರು.

## ಮಕ್ಕಳು ಅರಸರಾಗಬೇಕೆ?

**ಓದಲು ಸಮಯವಿಲ್ಲವೆಂದು ಪತ್ರಿಕೆಯನ್ನು ಕೈ ಬಿಡಬಾರದು, ಕನ್ನಡ ಪತ್ರಿಕೆಯೊಂದು ಕೈಯಲ್ಲಿದ್ದರೆ, ಹಿರಿಯರನ್ನು ಅನುಸರಿಸುವ ಮಕ್ಕಳು ಮೊಬೈಲ್ ಬಿಟ್ಟು ಅಕ್ಷರ ದಾಸರಾಗುತ್ತಾರೆ. ಅಕ್ಷರ ದಾಸರಾದರೆ ಅರಸರು ಆಗಬಲ್ಲರಲ್ಲವೇ ?**

## ನೀವೂ ಬರೆಯಬಹುದು

ಹಂಪಿ ಟೈಮ್ಸ್ ಪತ್ರಿಕೆ ಆರಂಭಿಸಿದ್ದು ನಾವಾದರೂ, ಕೈಹಿಡಿದು ನಡೆಸುವವರು ನೀವು. ನಮ್ಮ ಇಚ್ಛೆಯೂ ಒಳಗೊಂಡಂತೆ ನಿಮ್ಮ ಆಶಯಗಳಿಗೆ ತಕ್ಕಂತೆ ಪತ್ರಿಕೆಯನ್ನು ರೂಪಿಸುವ ಹೊಣೆಗಾರಿಕೆ, ಜವಾಬ್ದಾರಿಯೂ ನಮ್ಮದಾಗಿದೆ. ಇಲ್ಲಿ ಕೇವಲ ನಮ್ಮ ಬರವಣಿಗೆ ಅಷ್ಟೇ ಅಲ್ಲದೇ, ಬರಹಗಾರರಾಗಿದ್ದರೆ ನೀವೂ ಕೂಡ ನಿಮ್ಮ ಬರಹವನ್ನಿಲ್ಲಿ ಓದಬಹುದು. ಈ ನಿಟ್ಟಿನಲ್ಲಿ ನಿಮ್ಮಿಂದ ಕತೆ, ಕವನ, ವಿವಿಧ ಪ್ರಕಾರದ ಸಾಹಿತ್ಯ ಹಾಗೂ ಮಹಿಳಾ ಮತ್ತು ಮಕ್ಕಳ ಪರ ಚಿಂತನೆ ಒಳಗೊಂಡ ಲೇಖನಗಳನ್ನು ನಾವು ನಿರೀಕ್ಷಿಸುತ್ತಿದ್ದೇವೆ. ಜೊತೆಗೆ ಬಹುಮುಖ್ಯವಾಗಿ ಈ ನೆಲದ ಜನರ ಧ್ವನಿಯಾಗುವ ಹಂಬಲದಿಂದ ಸಾರ್ವಜನಿಕ ಕುಂದು ಕೊರತೆಗಳನ್ನು ಹೇಳಿಕೊಳ್ಳಬಹುದು. ಓದುಗ ಪ್ರಭುಗಳಾದ ನೀವು ಪತ್ರಿಕೆಯ ಭಾಗವೂ ಹೌದು. ಹೀಗಾಗಿ ನಿಮ್ಮ ಪ್ರತಿಕ್ರಿಯೆಯೂ ನಮಗೆ ಅತ್ಯಮೂಲ್ಯ. **ಕಥೆ, ಕವನ, ಸಾಹಿತ್ಯ, ತಂತ್ರಜ್ಞಾನ, ಆರೋಗ್ಯ, ಶಿಕ್ಷಣ, ಕ್ರೀಡೆ, ಕೃಷಿ, ಅಪರೂಪದ ವ್ಯಕ್ತಿಗಳು, ಅಂಕಣ, ಮಹಿಳೆ ಮತ್ತು ಮಕ್ಕಳು ಸೇರಿದಂತೆ ವಿವಿಧ ಕ್ಷೇತ್ರಗಳ** ಕುರಿತಾದ ನಿಮ್ಮ ಬರಹಗಳನ್ನೆಲ್ಲ ಸ್ವೀಕರಿಸುತ್ತೇವೆ ಆದರೆ, ಕಳುಹಿಸಿದ ಬರಹಗಳಲ್ಲಿ ಸಮಂಜಸ ಎನಿಸುವುದಷ್ಟೇ ಪ್ರಕಟಿಸುತ್ತೇವೆ. ನಮ್ಮ ನಂಬುಗೆಯ ಸಮಾಜಕ್ಕಾಗಿ ಒಳಿತನ್ನೇ ಬಯಸುತ್ತ, ಬರೆಯುತ್ತ ಎಲ್ಲರೂ ಒಳ ಗೊಳ್ಳೋಣ.

**ಬೆಳಕಿನ ಹಾದಿ:** ರಾಮಾಯಣ, ಮಹಾಭಾರತ, ಸಾಧು ಸಂತರು, ವಿಜ್ಞಾನಿ, ಹೀಗೆ ಪುಣ್ಯ ಪುರುಷರ ಜೀವನದಲ್ಲಿ ನಡೆದ ಘಟನೆಗಳು ಅಥವಾ ನೈತಿಕ ಕಥೆಗಳನ್ನು ಬರೆದು, ಕೊನೆಗೆ ಅಂತಹ ಕಥೆಯಿಂದ ನಮಗೆ ತಿಳಿಯುವ ಮೌಲ್ಯದ ಬಗ್ಗೆ 250 ಪದಗಳ ಮಿತಿಯಲ್ಲಿ ಬೆಳಕಿನ ಹಾದಿ ವಿಭಾಗಕ್ಕೆ ಬರೆದು ಕಳುಹಿಸಿ. ಸೂಕ್ತವಿದ್ದಲ್ಲಿ ಪ್ರಕಟಿಸುತ್ತೇವೆ. ಹೊಸ ಬರಹಗಾರರಿಗೆ ಅವಕಾಶ ಸಿದ್ಧವಾಗಿದೆ.

**ಸಂಪಾದಕರು: ಹಂಪಿ ಟೈಮ್ಸ್, ಶ್ರೀ ಓಂಕಾರೇಶ್ವರ ದೇವಸ್ಥಾನದ ಪಕ್ಕದಲ್ಲಿ, ವಾಲ್ಮೀಕಿ ವೃತ್ತದ ಹತ್ತಿರ, ಹೊಸಪೇಟೆ, ವಿಜಯನಗರ ಜಿಲ್ಲೆ.**
ಇ-ಮೇಲ್:hampitimes@gmail.com
M: 94486 33038

## ಓದುಗರ ಗಮನಕ್ಕೆ

**ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತುಲೋಪ, ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ.**
**ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.**
**- ಜಾಹೀರಾತು ವ್ಯವಸ್ಥಾಪಕರು.**

# ಮಕ್ಕಳಲ್ಲಿ ಎ ಡಿ ಹೆಚ್ ಡಿ ತೊಂದರೆ ಸವಾಲುಗಳು ಮತ್ತು ನಿರ್ವಹಣೆ

ಯಶಸ್ ಮೂರು ವರ್ಷದ ಪುಟ್ಟ ಮಗುವಾಗಿದ್ದಾಗ ಆತನನ್ನು ಹಿಡಿಯುವುದು ಆತನ ತಾಯಿ ತಂದೆಯರಿಗೆ ಅತಿ ದೊಡ್ಡ ಸವಾಲಾಗಿತ್ತು. ಸಾಮಾನ್ಯವಾಗಿ ಚುರುಕಾಗಿರುವ ಮಕ್ಕಳಿಗೆ ಹೋಲಿಸಿದರೆ ಈತನದ್ದು ತುಸು ಅತಿರೇಕವೇ ಎನ್ನಿಸುವಂತಹ ವರ್ತನೆ. ಮನೆಗೆ ಯಾರಾದರೂ ಅತಿಥಿಗಳು ಬಂದರೆ ತುಸು ಹೆಚ್ಚೇ ಉದ್ವೇಗಕ್ಕೆ ಒಳಗಾಗುತ್ತಿದ್ದ ಆತ ಮನೆಯ ಎಲ್ಲ ಸಾಮಾನುಗಳನ್ನು ಕಿತ್ತು ಹಾಕುತ್ತಿದ್ದ. ಒಂದೇ ಒಂದು ಕ್ಷಣವೂ ಆತನನ್ನು ಸುಮ್ಮನಿರಿಸಲು ಸಾಧ್ಯವಾಗುತ್ತಿರಲಿಲ್ಲ ಆತನ ಪಾಲಕರಿಗೆ.

ಮೂರು ವರ್ಷದವನಾದ ಯಶಸ್ ನನ್ನು ಪ್ಲೇ ಹೋಮ್ ಗೆ ಕಳಿಸೋಣವೆಂದು ಯೋಚಿಸಿದ ಪಾಲಕರು ಆತನನ್ನು ಪ್ಲೇ ಹೋಂಗೆ ದಾಖಲು ಮಾಡಿದರೆ ಅಲ್ಲಿಯೂ ಕೂಡ ಆತನನ್ನು ಒಂದೆಡೆ ಕೂಡಿಸಲು ಸಾಧ್ಯವಾಗದೆ ಕೈ ಚೆಲ್ಲುತ್ತಿದ್ದರು ಶಿಕ್ಷಕರು. ಉಳಿದ ಮಕ್ಕಳಿಗೆ ತೊಂದರೆ ಮಾಡದಿದ್ದರೂ ಆಟದ ಸಾಮಾನುಗಳನ್ನು ಕಿತ್ತುವ, ಕೆಡವುವ, ಸರಿದಾಡಿಸುವ ಆಟದ ಜಾರು ಬಂಡೆಯ ನಟ್ಟು ಬೋಲ್ಟ್ ಗಳನ್ನು ಬಿಚ್ಚುವ ಆತನ ಕೃತ್ಯ ಗಳಿಂದ ಆತನನ್ನು ಹಿಡಿಯುವುದರಲ್ಲಿ ಅಲ್ಲಿನ ಸಿಬ್ಬಂದಿಗೆ ಸಾಕಾಗಿ ಹೋಗುತ್ತಿತ್ತು.

ಮುದ್ದು ಮೊಗದ ಬೊಗಸೆ ಕಂಗಳ ಆ ಬಾಲಕನನ್ನು ಬಯ್ಯಲಾಗದ, ಶಿಕ್ಷಿಸಲೂ ಆಗದ ಪರಿಸ್ಥಿತಿ ಎಲ್ಲರದಾಗಿತ್ತು. ತಿಳಿಸಿ ಹೇಳಿದರೆ ಅರಿತುಕೊಳ್ಳಲಾಗದ ಮಗುವಿನ ಚಟುವಟಿಕೆಯ ವೈಪರೀತ್ಯತೆ ಪಾಲಕರನ್ನು ಕಂಗಾಲಾಗಿಸಿತ್ತು ಎಂದರೆ ತಪ್ಪಿಲ್ಲ. ಕೊನೆಗೆ ಆಪ್ತರ ಸಲಹೆಯ ಮೇರೆಗೆ ವೈದ್ಯರಿಗೆ ತೋರಿಸಿದಾಗ ಅರಿವಾಗಿದ್ದು ಆ ಮಗುವಿಗೆ ಎ ಡಿ ಎಚ್ ಡಿ ತೊಂದರೆ ಇದೆ ಎಂದು.



ಏನಿದು ಎ ಡಿ ಎಚ್ ಡಿ ಎಂದಿರಾ?? "ಅಟೆನ್ಷನ್ ಡೆಫಿಸಿಟ್ ಹೈಪರ್ ಆಕ್ಟಿವಿಟಿ ಡಿಸ್‌ಆರ್ಡರ್" ಎಂದು ಹೆಸರೇ ಹೇಳುವಂತೆ ಇದೊಂದು ಅತಿಯಾದ ಗಮನದ ಕೊರತೆಯನ್ನು ಹೊಂದಿರುವ ಉದ್ವೇಗಕ್ಕೊಳಗಾಗುವ, ಚಂಚಲ ಚಿತ್ತ ವನ್ನು ಹೊಂದಿರುವ, ಯಾವ ಮಾತನ್ನು ಕೇಳಿಸಿಕೊಳ್ಳದಿರುವ ಒಂದು ಸಂಕೀರ್ಣ ಸ್ಥಿತಿಯಾಗಿದ್ದು ವೈದ್ಯಕೀಯ ವಿಜ್ಞಾನದ ಪರಿಭಾಷೆಯಲ್ಲಿ ಹೇಳುವುದಾದರೆ ಮೆದುಳಿನ ಸಾಮರ್ಥ್ಯವನ್ನು ಕುಗ್ಗಿಸುವ ನರ ವೈಜ್ಞಾನಿಕ ಸಮಸ್ಯೆಯಾಗಿದೆ.

ಎ ಡಿ ಹೆಚ್ ಡಿ ತೊಂದರೆಯು ವಂಶ ಪಾರಂಪರ್ಯ ವಾಗಿ ಕೂಡ ಬರಬಹುದಾದ ತೊಂದರೆಯಾಗಿದ್ದು ಪಾಲಕರಲ್ಲಿ ಈ ತೊಂದರೆ ಇದ್ದರೆ ಅವರ ಮಕ್ಕಳಲ್ಲಿ ತೊಂದರೆ ಕಾಣಿಸಿಕೊಳ್ಳುವ ಶೇಕಡ 50ರಷ್ಟು ಸಾಧ್ಯತೆಗಳು ಇರುತ್ತವೆ. ಇದನ್ನು ಹೆಚ್ಚಾಗಿ ನಾವು ಮಕ್ಕಳಲ್ಲಿ ಕಾಣಬಹುದು. ಈ ಕಾಯಿಲೆಯನ್ನು ಗುಣಪಡಿಸಲು ಸಾಧ್ಯವೇ? ಎಂದರೆ ಕೇಳಿ ಬರುವ ಬಹುತೇಕ ಉತ್ತರ ಇಲ್ಲ ಎಂದು. ತೀವ್ರತರವಾದ ಈ ತೊಂದರೆಯಿಂದ ಬಳಲುತ್ತಿರುವ ಮಕ್ಕಳನ್ನು ಒಂದು ಹಂತದವರೆಗೆ ಮಾತ್ರ ಸಾಮಾಜಿಕ ಬದುಕು ನಿರ್ವಹಿಸಲು ಸಾಧ್ಯವಾಗುವಷ್ಟು ಪ್ರಯತ್ನ ಮಾಡಬಹುದೇ ಹೊರತು ಸಂಪೂರ್ಣ ಗುಣಮುಖವಾಗುತ್ತದೆ ಎಂಬ ಭರವಸೆಯನ್ನು ಕೊಡಲು ಸಾಧ್ಯವಿಲ್ಲ.



ವೀಣಾ ಹೇಮಂತಗೌಡ ಪಾಟೀಲ್
ಲೇಖಕರು, ಮುಂಡರಗಿ, ಗದಗ

Scan For Digital Colourful
HAMPI TIMES E-paper

ಎ ಡಿ ಎಚ್ ಡಿ ತೊಂದರೆ ಇರುವ ಮಕ್ಕಳಲ್ಲಿ ನರವ್ಯೂಹಗಳ ಸಂರಚನೆ ಸರಿಯಾಗಿ ಆಗಿರುವುದಿಲ್ಲ. ಮೆದುಳಿನ ವಾಹಕಗಳು ಕಗ್ಗಂಟಾಗಿದ್ದು ಯಾವುದೇ ರೀತಿಯ ಮಾಹಿತಿಗಳು ಮೆದುಳಿನಿಂದ ದೇಹದ ಉಳಿದ ಭಾಗಗಳಿಗೆ ಸರಳವಾಗಿ ಸಾಗುವುದಿಲ್ಲ. ಇಂತಹ ಮಕ್ಕಳಲ್ಲಿ ಯೋಚಿಸುವ ಮತ್ತು ಯೋಜಿಸುವ ಕ್ರಿಯಾಶೀಲತೆ ಕಡಿಮೆ.

**ಎ ಡಿ ಎಚ್ ಡಿ ಇಂದ ಬಳಲುವ ಮಕ್ಕಳು ಅನುಭವಿಸುವ ತೊಂದರೆಗಳು ಹೀಗಿವೆ.**

* ಕೆಲವೇ ಕ್ಷಣಗಳ ಹಿಂದೆ ನೀವು ಹೇಳಿದ ವಿಷಯಗಳನ್ನು ಆ ಮಕ್ಕಳು ಮರೆತು ಮತ್ತೆ ತಮ್ಮದೇ ರೀತಿಯಲ್ಲಿ ವ್ಯವಹರಿಸುತ್ತಾರೆ.
* ಮಕ್ಕಳು ವಿಪರೀತ ಮಾತನಾಡುತ್ತಾರೆ ಮತ್ತು ಎಷ್ಟೋ ಬಾರಿ ಅವರ ಮಾತುಗಳು ಅಸಂಬದ್ಧತೆಯಿಂದ ಕೂಡಿರುತ್ತವೆ.
* ಮಕ್ಕಳು ಅತಿಯಾದ ಚಟುವಟಿಕೆಯಿಂದ ಕೂಡಿರುತ್ತಾರೆ
* ವಸ್ತುಗಳನ್ನು ಎಸೆಯುವ, ಹೊಡೆಯುವ ಬಡಿಯುವ, ಬೀಳುವೆನೆಂಬ ಭಯವು ಇಲ್ಲದೆ ಹಾರಾಡುವ, ಜಿಗಿದಾಡುವ, ಕೆಲವೊಮ್ಮೆ ಪ್ರಾಣಕ್ಕೆ ಸಂಚಕಾರ ತರುವ ರೀತಿಯಲ್ಲಿ ಈ ಮಕ್ಕಳು ವರ್ತಿಸುತ್ತವೆ.
* ವಸ್ತುಗಳನ್ನು ಎಲ್ಲೆಂದರಲ್ಲಿ ಎಸೆಯುವುದು, ಕಿತ್ತುವುದು, ಹರಿಯುವುದು ಸದಾ ಒಂದಿಲ್ಲೊಂದು ಕೀಟಲೆಯಲ್ಲಿ ತೊಡಗಿಕೊಂಡಿರುತ್ತಾರೆ.
* ಯಾರೊಂದಿಗೂ ಸ್ನೇಹಿತರಾಗಲು ಇಷ್ಟಪಡದ ಇವರು ಯಾರ ಜೊತೆಗೂ ನೇರವಾಗಿ ಕಣ್ಣು ಸೇರಿಸಿ ಮಾತನಾಡಲು ಇಚ್ಛಿಸುವುದಿಲ್ಲ.
* ಮತ್ತೆ ಕೆಲವರು ಸದಾ ಹಗಲುಗನಸು ಕಾಣುವುದರಲ್ಲಿಯೇ ಇರುತ್ತಾರೆ.
* ವಿಷಯವನ್ನು ಅರಿತುಕೊಳ್ಳುವಲ್ಲಿ ತೊಂದರೆಯನ್ನು ಅನುಭವಿಸುವ ಮಕ್ಕಳು, ಕೈ ಬಾಯ್ಗಳ ಚಲನೆ ಮತ್ತು ಮಾತುಗಳಲ್ಲಿ ಸಮತೋಲನ ಇರುವುದಿಲ್ಲ.

ಮೇಲ್ಕಂಡ ತೊಂದರೆಗಳಿಗೆ ತಜ್ಞ ವೈದ್ಯರೊಂದಿಗೆ ಸಮಾಲೋಚನೆ ಮತ್ತು ಔಷಧೀಯ ಚಿಕಿತ್ಸೆ ಇರುವುದು ನಿಜವಾದರೂ ಈ ತೊಂದರೆ ಸಂಪೂರ್ಣವಾಗಿ ಗುಣಮುಖವಾಗುವುದಿಲ್ಲ.

ಹಾಗೆಂದು ವೈದ್ಯರಿಗೆ ತೋರಿಸದೆ, ಚಿಕಿತ್ಸೆ ಪಡೆಯದೆ ಹೋದರೆ ಈ ತೊಂದರೆ ಹೆಚ್ಚಾಗುವ ಸಾಧ್ಯತೆ ಬಹಳ. ಇಂತಹ ತೊಂದರೆಗೆ ವೈದ್ಯಕೀಯ ಸಮಾಲೋಚನೆ, ಆಪ್ತ ಸಲಹೆ ಮತ್ತು ಪಾಲಕರ ಅತೀವ ಸಹನ ಶಕ್ತಿ ಮಗುವಿನ ಮಾನಸಿಕ ಬೆಳವಣಿಗೆಯಲ್ಲಿ ಕೊಂಚ ಸುಧಾರಣೆಯನ್ನು ತರಬಹುದು.

**ಪಾಲಕರು ಮಕ್ಕಳು ಅನುಭವಿಸುವ ಈ ತೊಂದರೆಯನ್ನು ನಿರ್ಲಕ್ಷಿಸಿದಾಗ**

* ಮಕ್ಕಳು ಶಾಲಾ ಪಠ್ಯ ಮತ್ತು ಪಠ್ಯೇತರ ಚಟುವಟಿಕೆಗಳಲ್ಲಿ ಮತ್ತಷ್ಟು ಹಿಂದುಳಿಯುತ್ತಾರೆ.
* ಸಾಮಾಜಿಕವಾಗಿ ಸಾರ್ವಜನಿಕವಾಗಿ ಜನರೊಂದಿಗೆ ಬೆರೆಯಲು ಸಾಧ್ಯವಾಗುವುದಿಲ್ಲ.
* ಮಗುವಿನ ಸ್ವಾಭಿಮಾನಕ್ಕೆ ಧಕ್ಕೆ ಉಂಟಾಗುತ್ತದೆ ಮತ್ತು ಮಗು ಆತ್ಮವಿಶ್ವಾಸವನ್ನು ಕಳೆದುಕೊಂಡು ಕೀಳರಿಮೆಯಿಂದ ಬಳಲುತ್ತದೆ.
* ಮಗುವಿನ ವರ್ತನೆಯಲ್ಲಿ ದೋಷಗಳು ಕಂಡುಬರುತ್ತವೆ.
* ಭಾವನಾತ್ಮಕವಾಗಿ ಕಂಗೆಡುವ ಮಕ್ಕಳ ಆತ್ಮಸ್ಥೈರ್ಯ ಕುಸಿಯುತ್ತದೆ. ಪರಿಣಾಮವಾಗಿ ಮಕ್ಕಳು ಅಕೃತ್ಯಗಳಲ್ಲಿ ತೊಡಗುವ ಸಾಧ್ಯತೆಗಳು ಹೆಚ್ಚಾಗುತ್ತದೆ.

ತಮ್ಮೆಲ್ಲ ತೊಂದರೆಗಳಿಗೂ ಪಾಲಕರು ಶಿಕ್ಷಕರು ಮತ್ತು ಸಮಾಜವನ್ನು ಹೊಣೆಯಾಗಿಸುವ ಮಕ್ಕಳಿಗೆ ಸೂಕ್ತ ಚಿಕಿತ್ಸೆ ಮತ್ತು ಆಪ್ತಸಮಾಲೋಚನೆದೊರೆಯದೆಹೋದಲ್ಲಿತೊಂದರೆಯಾಗುವುದು ಖಂಡಿತ.

ಎ ಡಿ ಎಚ್ ಡಿ ಇರುವ ಎಲ್ಲ ಮಕ್ಕಳ ತೊಂದರೆಗಳು ಒಂದೇ ರೀತಿ ಇರುವುದಿಲ್ಲ. ಯಾವುದೇ ಕೆಲಸ ಕಾರ್ಯಗಳಲ್ಲಿ ನಿರಂತರವಾಗಿ ತೊಡಗಿಕೊಳ್ಳುವುದು ಇವರಿಂದ ಸಾಧ್ಯವಿಲ್ಲ. ಇಂತಹ ಮಕ್ಕಳು ವ್ಯವಹಾರಿಕ ಜಗತ್ತಿನಿಂದ ದೂರವಾಗಿರುತ್ತಾರೆ. ಸಾಮಾಜಿಕ ನೀತಿ ನಿಯಮಗಳು, ಶಿಸ್ತು, ಪ್ರಜ್ಞೆ ಇವರಲ್ಲಿ ಬಹಳಷ್ಟು ಕಡಿಮೆ. ಆದರೆ ಭಾವನಾತ್ಮಕವಾಗಿ ತುಂಬಾ ಸೂಕ್ಷ್ಮ ಮನಸ್ಥಿತಿ ಇವರದಾಗಿದ್ದು ನಿರ್ಲಕ್ಷಿಸಿದಾಗ ನಕಾರಾತ್ಮಕ ಪರಿಣಾಮವನ್ನು ಬೀರುವ ಸಾಧ್ಯತೆಗಳು ಬಹಳ. ಅವರವರ ತೊಂದರೆಗೆ ಅನುಸಾರವಾಗಿ ಅವರಿಗೆ ಚಿಕಿತ್ಸೆ ಮತ್ತು ಆಪ್ತ ಸಮಾಲೋಚನೆ ನೀಡಲಾಗುತ್ತದೆ. ಅಂತಹ ಮಕ್ಕಳಿಗೆ ವಿಶೇಷ ಶಿಕ್ಷಣಕ್ಕೆ ಆದ್ಯತೆ ನೀಡಬೇಕು.

ಇದೆಲ್ಲಕ್ಕೂ ಮಿಗಿಲಾಗಿ ಅಂತಹ ಮಕ್ಕಳ ಪಾಲಕರು ತಮ್ಮ ಮಕ್ಕಳನ್ನು ಪಾಲಿಸಲು ಅವಶ್ಯಕವಾದ ತಿಳುವಳಿಕೆ ಮತ್ತು ತರಬೇತಿಗಳನ್ನು ತಾವೇ ಹೊಂದಿರಬೇಕಾದದ್ದು ಅತ್ಯಂತ ಸೂಕ್ತ ಮತ್ತು ಅನಿವಾರ್ಯ. ಬಾಯಿಂದ ಹೇಳಿದಷ್ಟು ಸುಲಭವಲ್ಲ ಅಂತಹ ಮಕ್ಕಳನ್ನು ಪರಿಪಾಲಿಸುವುದು.ಪಾಲಕರ ಸಹನೆಯಿಂದ ಕೂಡಿದ ಒಡನಾಟ ಮತ್ತು ಅವರು ಕೊಡ ಮಾಡುವ ಭದ್ರತೆಗಳು ಮಕ್ಕಳಲ್ಲಿ ಅಪಾರ ಆತ್ಮವಿಶ್ವಾಸವನ್ನು ಮೂಡಿಸುತ್ತದೆ. ತುಸು ಕಷ್ಟವಾದರೂ ಸೂಕ್ತ ಚಿಕಿತ್ಸೆ ಮತ್ತು ತರಬೇತಿ ದೊರೆತಲ್ಲಿ ಎ ಡಿ ಎಚ್ ಡಿ ತೊಂದರೆಯಿಂದ ಬಳಲುವ ಮಕ್ಕಳು ಸಾಮಾನ್ಯವಾದ ಬದುಕನ್ನು ನಡೆಸಲು ಸಾಧ್ಯವಾಗುತ್ತದೆ ಎಂಬುದು ಸಮಾಧಾನದ ಸಂಗತಿ. ಮತ್ತೊಂದು ವಿಶೇಷವೆಂದರೆ ಈ ತೊಂದರೆಯಿಂದ ಬಳಲುವ ಮಕ್ಕಳು ದೈಹಿಕವಾಗಿ ಅಪಾರ ಶಕ್ತಿಯನ್ನು ಹೊಂದಿದ್ದು ಉತ್ತಮವಾದ ತರಬೇತಿ ನೀಡಿದಲ್ಲಿ ಒಳ್ಳೆಯ ಕ್ರೀಡಾಪಟುವಾಗುವ ಅರ್ಹತೆಯನ್ನು ಹೊಂದಿರುತ್ತಾರೆ. 2024ರ ಪ್ಯಾರಿಸ್ ಒಲಂಪಿಕ್ಸ್ ನಲ್ಲಿ ಪದಕ ವಿಜೇತರಲ್ಲಿ ಸಾಕಷ್ಟು ಜನ ಎ ಡಿ ಹೆಚ್ ಡಿ ತೊಂದರೆ ಉಳ್ಳವರಾಗಿದ್ದರು.

ಸ್ನೇಹಿತರೆ, ಎ ಡಿ ಎಚ್ ಡಿ ತೊಂದರೆಯಿಂದ ಬಳಲುತ್ತಿರುವ ಮಕ್ಕಳ ಪಾಲಕರು ಎರಡು ರೀತಿಯಲ್ಲಿ ಹೋರಾಟಗಳನ್ನು ಮಾಡಬೇಕಾಗುತ್ತದೆ. ಮೊದಲು ಅವರ ಮಕ್ಕಳ ತೊಂದರೆಯ ಜೊತೆಗೆ ಜೀವನಪರ್ಯಂತದ ಸಹನಶೀಲ ಸ್ವಭಾವವನ್ನು ರೂಡಿಸಿಕೊಂಡು ಅವರನ್ನು ಬೆಳೆಸುವುದು. ಎರಡನೆಯದು ಸೋ ಕಾಲ್ಡ್ ಆರೋಗ್ಯವಂತ ಸಮಾಜದ ಜನರ ಅವಿವೇಕದ ವರ್ತನೆಯಿಂದ. ಈ ತೊಂದರೆಯಿಂದ ಬಳಲುತ್ತಿರುವ ಮಕ್ಕಳಿಗೆ ಮತ್ತು ಪಾಲಕರಿಗೆ ನಿಮ್ಮ ಸಹಾನುಭೂತಿಯ ಅವಶ್ಯಕತೆ ಇದೆಯೇ ಹೊರತು, ಹಿಂದಿನ ಜನ್ಮದ ಕರ್ಮಗಳನ್ನು ನೆನಪಿಸುವ ಹೀಯಾಳಿಕೆಯ ಮಾತುಗಳಲ್ಲ. ಈಗಾಗಲೇ ನೊಂದಿರುವ ಅವರ ಮನಸ್ಸಿಗೆ ಪ್ರಜ್ಞಾಪೂರ್ವಕವಾದ ನಮ್ಮ ಮಾತುಗಳು ತಂಪನ್ನೆರೆಯಲಿ, ಧೈರ್ಯ ಮತ್ತು ಭರವಸೆ ಮೂಡಿಸಲಿ ಎಂಬ ಆಶಯದೊಂದಿಗೆ

# ಲೋಕಾಯುಕ್ತರಿಂದ ಅಹವಾಲು ಸ್ವೀಕಾರ

■ **ಹಂಪಿ ಟೈಮ್ಸ್ ಕೊಪ್ಪಳ**

ಗೌರವಾನ್ವಿತ ಲೋಕಾಯುಕ್ತರು ಬೆಂಗಳೂರು ಹಾಗೂ ಅಪರ ಪೊಲೀಸ್ ಮಹಾನಿರ್ದೇಶಕರು, ಕರ್ನಾಟಕ ಲೋಕಾಯುಕ್ತ ಬೆಂಗಳೂರು ಅವರ ಆದೇಶದ ಮೇರೆಗೆ ಕೊಪ್ಪಳ ಲೋಕಾಯುಕ್ತ ಅಧಿಕಾರಿಗಳಿಂದ ಕೊಪ್ಪಳ ತಾಲ್ಲೂಕಿನಲ್ಲಿ ಸಾರ್ವಜನಿಕರ ಕುಂದುಕೊರತೆಗಳ ಅಹವಾಲು ಸ್ವೀಕಾರಿಸಲು ಇಂದು ಅಕ್ಟೋಬರ್ 09ರಂದು ಬೆಳಿಗ್ಗೆ 11 ಗಂಟೆಗೆ ಕೊಪ್ಪಳ ತಾಲ್ಲೂಕು ಪಂಚಾಯತ್ ಸಭಾಂಗಣದಲ್ಲಿ ಅಹವಾಲು ಸ್ವೀಕಾರ ಸಭೆಯನ್ನು ಹಮ್ಮಿಕೊಳ್ಳಲಾಗಿದೆ.

ಕೊಪ್ಪಳ ತಾಲ್ಲೂಕು ವ್ಯಾಪ್ತಿಯ ಸಾರ್ವಜನಿಕರಲ್ಲಿ ಯಾರಿಗಾದರೂ ಸರ್ಕಾರಿ ಅಧಿಕಾರಿಗಳಿಂದ ತಮಗೆ ಆಗಬೇಕಾದ ಕೆಲಸಗಳಲ್ಲಿ ವಿಳಂಬವಾಗಿದ್ದರೆ ಅಥವಾ ಅಧಿಕಾರಿಗಳು ನ್ಯಾಯಯುತವಾಗಿ ಮಾಡಿಕೊಡಬೇಕಾದ ಕೆಲಸಗಳಲ್ಲಿ ವೃಥಾ ತೊಂದರೆ ಕೊಡುತ್ತಿದ್ದರೆ ಅಥವಾ ಲಂಚ ಕೇಳುವುದು ಇತ್ಯಾದಿ ದುರಾಡಳಿತದಲ್ಲಿ ತೊಡಗಿದ್ದರೆ ಈ ಕುರಿತು ದೂರು ಸ್ವೀಕರಿಸಲು ಲೋಕಾಯುಕ್ತರಿಂದ ಸಾರ್ವಜನಿಕ ಕುಂದುಕೊರತೆಗಳ ಅಹವಾಲು ಸ್ವೀಕರಿಸುವ ಕಾರ್ಯಕ್ರಮ ಹಾಗೂ ತಾಲ್ಲೂಕ ಮಟ್ಟದ ಅಧಿಕಾರಿಗಳ ಸಭೆ ನೆಡೆಸಲು ತೀರ್ಮಾನ ಮಾಡಲಾಗಿದೆ.

ಈ ಸಭೆಯಲ್ಲಿ ಲೋಕಾಯುಕ್ತ ಅಧಿಕಾರಿಗಳು ಎಲ್ಲಾ ಇಲಾಖೆಯ ತಾಲ್ಲೂಕ ಮಟ್ಟದ ಅಧಿಕಾರಿಗಳೊಂದಿಗೆ ಸಭೆ ನಡೆಸಲಿದ್ದಾರೆ. ಸಾರ್ವಜನಿಕರು ತಮ್ಮ ಕುಂದುಕೊರತೆಗಳನ್ನು ನೇರವಾಗಿ ಬಂದು ಸಲ್ಲಿಸಲು ಹಾಗೂ ಸ್ಥಳದಲ್ಲಿಯೇ ಇದ್ದ ಅಧಿಕಾರಿಗಳೊಂದಿಗೆ ಕೆಲಸ ನೆರವೇರಿಸಿಕೊಳ್ಳಲು ಅಥವಾ ಸ್ಥಳದಲ್ಲಿಯೇ ದೂರು ಅರ್ಜಿಯ ಫಾರಂ ನಂ: 1 & 2 ತೆಗೆದುಕೊಂಡು ದೂರು ನೀಡಲು ಅನುಕೂಲ ಕಲ್ಪಿಸಲಾಗಿದ್ದು, ಸಾರ್ವಜನಿಕರು ಸಭೆಯ ಸದುಪಯೋಗ ಪಡೆದುಕೊಳ್ಳಲು ಈ ಮೂಲಕ ತಿಳಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ: 9364062699, 9364062700, 9364062701, 9364062702 ಹಾಗೂ 9364062703 ಗೆ ಸಂಪರ್ಕಿಸಬಹುದು ಎಂದು ಕರ್ನಾಟಕ ಲೋಕಾಯುಕ್ತ ಕೊಪ್ಪಳ ಪೊಲೀಸ್ ಉಪಾಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅ.10ರಂದು ಮಹಾತ್ಮ ಗಾಂಧೀಜಿ ಜಯಂತಿಯ ಕಾರ್ಯಕ್ರಮಗಳು

■ **ಹಂಪಿ ಟೈಮ್ಸ್ ಹೊಸಪೇಟೆ**

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಪದವಿ ಪೂರ್ವ ಶಿಕ್ಷಣ ಇಲಾಖೆ, ಶಾಲಾ ಶಿಕ್ಷಣ ಇಲಾಖೆ, ನಗರಸಭೆ ಹಾಗೂ ಕೈಮಗ್ಗ ಮತ್ತು ಜವಳಿ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಮಹಾತ್ಮ ಗಾಂಧೀಜಿಯವರ 155ನೇ ಜಯಂತಿ ಅಂಗವಾಗಿ ಅಕ್ಟೋಬರ್ 10ರಂದು ಬೆಳಗ್ಗೆ 10 ಗಂಟೆಗೆ ಹೊಸಪೇಟೆಯ ಜಿಲ್ಲಾ ಒಳಾಂಗಣ ಕ್ರೀಡಾಂಗಣದಲ್ಲಿ ವಿಶೇಷ ಕಾರ್ಯಕ್ರಮಗಳು ನಡೆಯಲಿವೆ.

ಅಂದು, ಬಾಪೂಜಿ ಪ್ರಬಂಧ ಸ್ಪರ್ಧೆ ವಿಜೇತರಿಗೆ ಬಹುಮಾನ ವಿತರಣೆ, ಗಾಂಧಿಪ್ರಿಯ ಭಜನೆಗಳ ಗಾಯನ, ಸರ್ವಧರ್ಮ ಪ್ರಾರ್ಥನೆ ಮತ್ತು ವಿಶೇಷ ಉಪನ್ಯಾಸ ಮತ್ತು ಖಾದಿ ವಸ್ತುಗಳ ಪ್ರದರ್ಶನ ಕಾರ್ಯಕ್ರಮವನ್ನು ಜಿಲ್ಲಾ ಉಸ್ತುವಾರಿ ಸಚಿವರಾದ ಬಿ.ಜೆಡ್. ಜಮೀರ್ ಅಹ್ಮದ್ ಖಾನ್ ಅವರು ಉದ್ಘಾಟಿಸುವರು. ವಿಜಯನಗರ ವಿಧಾನಸಭಾ ಕ್ಷೇತ್ರದ ಶಾಸಕರಾದ ಹೆಚ್. ನಗರಸಭೆ ಅಧ್ಯಕ್ಷ ರೂಪೇಶ್ ಕುಮಾರ ಎನ್., ಹುಡಾ ಅಧ್ಯಕ್ಷ ಹೆಚ್.ಎನ್. ಎಫ್ ಇಮಾಮ್ ನಿಯಾಜಿ ಉಪನ್ಯಾಸಕ ಡಾ. ದಯಾನಂದ ಕಿನ್ನಾಳರವರು ವಿಶೇಷ ಉಪನ್ಯಾಸ ನೀಡುವರು ಎಂದು ಜಿಲ್ಲಾ ವಾರ್ತಾಧಿಕಾರಿ ಗವಿಸಿದ್ದಪ್ಪ ಹೊಸಮನಿ ತಿಳಿಸಿದ್ದಾರೆ.

# ಮೈಸೂರು ದಸರಾ ಅಂದು ಇಂದು



ದಸರಾ ಎಂದೊಡನೆ ನೆನಪಾಗುವುದೇ ಮೈಸೂರು ನಗರ. ಈ ಸಂದರ್ಭದಲ್ಲಿ ಇಡೀ ಮೈಸೂರು ನಗರವನ್ನೇ ಮದುವಣಗಿತ್ತಿಯಂತೆ ಶೃಂಗರಿಸಿರುತ್ತಾರೆ. ಈ ವೈಭವವನ್ನು ನೋಡುವುದೇ ಒಂದು ಸೊಗಸು.

ದಸರಾ ಹಬ್ಬವು ಹಿಂದೆ ಆಳರಸರ ಮಹೋತ್ಸವವಾಗಿತ್ತು. ಇಂದು ನಾಡ ಹಬ್ಬವನ್ನಾಗಿ ಆಚರಿಸಲಾಗುತ್ತಿದೆ. ಮೈಸೂರು ದಸರ ಮಹೋತ್ಸವಕ್ಕೆ ನಾಲ್ಕು ಶತಮಾನಗಳಿಗೂ ಹೆಚ್ಚಿನ ಇತಿಹಾಸವಿದೆ. ದಸರಾ ಹಬ್ಬವನ್ನು ವಿಜಯದ ಸಂಕೇತವಾಗಿ ಆಚರಿಸಲಾಗುತ್ತದೆ. ವಿಜಯನಗರದ ಅರಸರು ಈ ದಸರಾ ಮಹೋತ್ಸವವನ್ನು ಆಚರಿಸಲು ಪ್ರಾರಂಭಿಸಿದರು. ಅವರ ಸಾಮ್ರಾಜ್ಯ ಪತನದ ನಂತರ ಸಾಮಂತ ರಾಜರಾಗಿದ್ದ ಮೈಸೂರಿನ ಯದುವಂಶಸ್ಥರು ಇದನ್ನು ಮುಂದುವರಿಸಿಕೊಂಡು ಬಂದಿದ್ದಾರೆ ಎಂದು ಇತಿಹಾಸದಲ್ಲಿ ಉಲ್ಲೇಖಿಸಲಾಗಿದೆ.

ವಿಜಯನಗರದ ಪರಂಪರೆಯ ಪ್ರತೀಕವಾಗಿದ್ದ ವಿಜಯದಶಮಿಯ ಆಚರಣೆಯನ್ನು ಅಂದು ರಾಜ್ಯಭಾರ ಮಾಡುತ್ತಿದ್ದ ರಾಜ ಒಡೆಯರ್ ಮೊದಲ ಬಾರಿಗೆ ಆಚರಿಸಲು ಪ್ರಾರಂಭಿಸಿದರು. ಆಗ ಶ್ರೀರಂಗಪಟ್ಟಣವನ್ನು ರಾಜಧಾನಿಯಾಗಿಸಿಕೊಂಡು ರಾಜರು ಆಡಳಿತವನ್ನು ನಡೆಸುತ್ತಿದ್ದರು. ನಂತರ ಮುಮ್ಮಡಿ ಕೃಷ್ಣರಾಜ ಒಡೆಯರು ತಮ್ಮ ಕಾಲದಲ್ಲಿ ರಾಜಧಾನಿಯನ್ನು ಶ್ರೀರಂಗಪಟ್ಟಣದಿಂದ ಮೈಸೂರಿಗೆ ಬದಲಿಸಿ ಕೊಂಡು ದಸರಾ ಆಚರಣೆಯನ್ನು ಮುಂದುವರೆಸಿದರು. ನಾಲ್ವಡಿ ಕೃಷ್ಣರಾಜ ಒಡೆಯರ ಕಾಲದಲ್ಲಿ ಮೈಸೂರು ದಸರಾದ ವೈಭವ ಉತ್ತುಂಗಕ್ಕೇರಿ ವಿಶ್ವವಿಖ್ಯಾತವಾಯಿತು. ಇವರ ನಂತರ ಶ್ರೀ ಜಯಚಾಮರಾಜ ಒಡೆಯರ ಕಾಲದಲ್ಲಿ ಇನ್ನಷ್ಟು ವೈಭವ ಪಡೆದುಕೊಂಡು ಜಾಗತಿಕ ಆಕರ್ಷಣೆಯನ್ನು ಪಡೆದುಕೊಂಡಿತು.



ಚೇತನ ಭಾರ್ಗವ
ಬೆಂಗಳೂರು ಹವ್ಯಾಸಿ ಬರಹಗಾರ್ತಿ

Scan For Digital Colourful
HAMPI TIMES E-paper

ಹಿಂದೆ ದಸರಾ ಮಹೋತ್ಸವದಲ್ಲಿ ತಮ್ಮ ಸೈನ್ಯದೊಂದಿಗೆ ಶಕ್ತಿಪ್ರದರ್ಶನ ಸ್ಪರ್ಧೆಯಲ್ಲಿ ಪಾಲ್ಗೊಳ್ಳಲು ಎಲ್ಲಾ ಮಾಂಡಲೀಕರು ಸಾಮಂತರು ರಾಜಧಾನಿಗೆ ಆಗಮಿಸಿ ಜನರೆದುರು ತಮ್ಮ ದಳದ ಸೈನ್ಯ ಸಾಮರ್ಥ್ಯವನ್ನು ಪ್ರದರ್ಶಿಸುತ್ತಿದ್ದರು. ಈ ಶಕ್ತಿ ಪ್ರದರ್ಶನದ ವೀಕ್ಷಣೆಗಾಗಿ ಹಂಪಿಯಲ್ಲಿ ಮಹಾನವಮಿ ದಿಬ್ಬವನ್ನು ನಿರ್ಮಾಣ ಮಾಡಲಾಗಿತ್ತು. ಈ ದಿಬ್ಬದಲ್ಲಿ ರತ್ನ ಖಚಿತ ಸಿಂಹಾಸನದಲ್ಲಿ ವಿರಾಜಮಾನರಾಗುತ್ತಿದ್ದ ರಾಜರು ನೃತ್ಯ, ಸಂಗೀತ, ಆಟ, ಪಾಠ ಕತ್ತಿವರಸೆ, ಮಲ್ಲಯುದ್ಧ ಕವಾಯತು ವೀಕ್ಷಿಸುತ್ತಿದ್ದರು. ಪ್ರತಿಭಾವಂತರಿಗೆ ರಾಜರೇ ಪುರಸ್ಕರಿಸುತ್ತಿದ್ದರು. ಇಂದು ಸರ್ಕಾರಿ ಪ್ರಾಯೋಜಕತ್ವದಲ್ಲಿ ದಸರಾ ಕ್ರೀಡಾಕೂಟ ಹಾಗೂ ಸಂಗೀತ ಮಹೋತ್ಸವ ನಡೆಯುತ್ತದೆ. ನವಮಿ ದಿನದಂದು ರಾಜರೇ ನಿಂತು ಎಲ್ಲಾ ವಾಹನಗಳಿಗೆ ಪೂಜೆಯನ್ನು ಸಲ್ಲಿಸುತ್ತಿದ್ದರು. ವಿಜಯನಗರ ಅರಸರ ಈ ವಿಶಿಷ್ಟ ಸಂಪ್ರದಾಯವನ್ನು ಮೈಸೂರು ರಾಜರು ಪಾಲಿಸಿಕೊಂಡು ಬಂದಿದ್ದಾರೆ.

ರಾಜನೇ ಪ್ರತ್ಯಕ್ಷ ದೈವವೆಂಬ ಭಾವನೆಯಿದ್ದ ಆ ಕಾಲದಲ್ಲಿ, ಅಂದು ಅಂಬಾರಿಯಲ್ಲಿ ಸ್ವತಃ ಮಹಾರಾಜರೇ ಕೂರುತ್ತಿದ್ದರು. ಜಂಬೂ ಸವಾರಿ ಬನ್ನಿಮಂಟಪಕ್ಕೆ ಬಂದ ಬಳಿಕ ಮಹಾರಾಜರು ಆನೆಯಿಂದ ಇಳಿದು ಕುದುರೆಯ ಮೇಲೆ ಕುಳಿತು ಸೈನ್ಯದ ಪರಿವೀಕ್ಷಣೆ ಮಾಡುತ್ತಿದ್ದರು. ಯುದ್ಧ ಸಂದರ್ಭದಲ್ಲಿ ವೀರಾವೇಶದಿಂದ ಹೋರಾಡಿದ ಸೇನಾನಿಗಳಿಗೆ, ಶೂರ ಸೈನಿಕರಿಗೆ ಸ್ವತಃ ರಾಜರೇ ಪ್ರಶಸ್ತಿಗಳನ್ನು ನೀಡಿ ಗೌರವಿಸುತ್ತಿದ್ದರು.

ಇಂದು 750 ಕೆಜಿ ತೂಕದ ಬಂಗಾರದ ಅಂಬಾರಿಯಲ್ಲಿ ತಾಯಿ ಚಾಮುಂಡೇಶ್ವರಿಯ ಪುತ್ಥಳಿಯನ್ನು ಕೂರಿಸಿ ಗಜರಾಜನ ಗಾಂಭೀರ್ಯ ನಡಿಗೆಯೊಂದಿಗೆ ಮೈಸೂರು ರಾಜಭೀದಿಯಲ್ಲಿ ಜಂಬೂಸವಾರಿಯು ವೈಭವದಿಂದ ಸಾಗುತ್ತದೆ. ಜಂಬೂ ಸವಾರಿ ಮೈಸೂರು ದಸರದ ಪ್ರಮುಖ ಆಕರ್ಷಣೆ. ಜಂಬೂ ಸವಾರಿಯ ಜೊತೆಗೆ ಮೈಸೂರು ರಾಜರು ಬಳಸುತ್ತಿದ್ದ ಸಾರೋಟುಗಳು, ಎತ್ತಿನ ಗಾಡಿಗಳು, ಕುದುರೆ ಗಾಡಿಗಳು, ಕರ್ನಾಟಕ ಕಲೆ ಸಾಹಿತ್ಯ ಸಂಸ್ಕೃತಿ ಪರಂಪರೆ ಬಿಂಬಿಸುವ ಸ್ತಬ್ಧ ಚಿತ್ರಗಳು, ವೀರಗಾಸೆ, ಕೋಲಾಟ, ಕೀಲು ಕುದುರೆ, ಹುಲಿವೇಷ ಮೊದಲಾದ ಜಾನಪದ ತಂಡಗಳೊಂದಿಗೆ ಮೆರವಣಿಗೆಯನ್ನು ನಡೆಸಲಾಗುತ್ತದೆ. ಬನ್ನಿಮಂಟಪದಲ್ಲಿ ಬನ್ನಿ ವಿತರಣೆಯೊಂದಿಗೆ ಪಟಾಕಿ ಪ್ರದರ್ಶನ ಮಾಡಿ ಉತ್ಸವ ಕೊನೆಗೊಳಿಸಲಾಗುತ್ತದೆ. ಇದನ್ನು ವೀಕ್ಷಿಸಲು ರಸ್ತೆಯ ಇಕ್ಕೆಲದಲ್ಲೂ ಪ್ರವಾಸಿಗರು ಕಿಕ್ಕಿರಿದು ತುಂಬಿರುತ್ತಾರೆ. ಅಂಗಡಿ ಮುಂಗಟ್ಟುಗಳು ವಿದ್ಯುತ್ ದೀಪದಿಂದ ಝಗಮಗಿಸುತ್ತಿರುತ್ತವೆ. ದಸರಾ ಸಮಯದಲ್ಲಿ ಮೈಸೂರನ್ನು ನೋಡುವುದೇ ಕಣ್ಣಿಗೆ ಹಬ್ಬ. ಇಲ್ಲಿ ಅರಮನೆಯ ಅಷ್ಟ ವೈಭವವನ್ನು ಕಣ್ತುಂಬಿಸಿಕೊಳ್ಳಲು ದೇಶದ ಮೂಲೆ ಮೂಲೆಯಿಂದ ಪ್ರತಿವರ್ಷವೂ ಲಕ್ಷಾಂತರ ಪ್ರವಾಸಿಗರ ಮಹಾಸಾಗರವೇ ಹರಿದು ಬರುತ್ತದೆ.

ದಸರಾ ಕನ್ನಡ ನಾಡಿನ ನಾಡಹಬ್ಬ . ಇದು ಸಾಂಸ್ಕೃತಿಕ ರಾಜಧಾನಿಯಾದ ಮೈಸೂರಿನಲ್ಲಿ ನಡೆದರೂ ಸಮಸ್ತ ಕನ್ನಡಿಗರ ಹೆಮ್ಮೆ ಹಾಗೂ ಅಸ್ಮಿತೆಯ ಪ್ರತೀಕ. ರಾಜವಂಶಗಳ ಆಡಳಿತ ಮುಗಿದು ಪ್ರಜೆಗಳೇ ಪ್ರಭುವಾದ ಪ್ರಜಾಪ್ರಭುತ್ವದಲ್ಲಿ ದಸರಾ ಹಬ್ಬದ ಸ್ವರೂಪ ಕೊಂಚ ಬದಲಾದರೂ ಅದರ ಹಿಂದಿನ ಭಾವನೆ ಭಕ್ತಿ ಬದಲಾಗಿಲ್ಲ. ಮೈಸೂರು ದಸರಾ ಎಷ್ಟೊಂದು ಸುಂದರ ಚೆಲ್ಲಿದೆ ನಗೆಯ ಪನ್ನೀರ ಎಂಬ ಜನಪ್ರಿಯ ಗೀತೆಯಂತೆ ಪ್ರತೀವರುಷವೂ ಹೊಸ ಚೈತನ್ಯ ಹುರುಪು ಸಂಭ್ರಮದೊಂದಿಗೆ ಆಚರಿಸಲ್ಪಡುತ್ತಿರುವುದು, ಜನಸಾಗರವೇ ಹರಿದುಬಂದು ಮೈಸೂರು ನಗರ ಭರ್ತಿಯಾಗುತ್ತಿರುವುದೇ ಇದರ ಸಾಕ್ಷಿ. ಇದು ಇಂದಿಗೂ ಎಂದಿಗೂ ನವೀನ ಹಾಗೂ ಶಾಶ್ವತ.

## ಕವಿ ಮನಸು

### ನಾಡಹಬ್ಬ ದಸರಾ

ಬಂದಿತು ನಾಡ ಹಬ್ಬ ದಸರಾ
ತಂದಿತು ಮನೆ ಮನೆಗಳಲ್ಲಿ ಸಡಗರ
ಆಯಿತು ಊರಿಗೂರು ಸಿಂಗಾರ
ಭಕ್ತಿ ಭಾವಗಳ ಝೇಂಕಾರ

ಎಲ್ಲಿ ನೋಡಿದರಲ್ಲಿ ಬೆಳಕಿನ ಆವರಣ
ಮನೆ ಮನೆಯಲ್ಲಿ ಹೂವಿನ ತೋರಣ
ಅರಮನೆಯಲ್ಲಿ ದೀಪದ ಅಲಂಕರಣ
ನವರಾತ್ರಿಯೇ ಇದಕೆಲ್ಲ ಕಾರಣ

ಅರಮನೆಯಲ್ಲಿ ಪೂಜೆ ಪುನಸ್ಕಾರ
ಮನೆ ಮನೆಯಲ್ಲಿ ಬೊಂಬೆ ಅಲಂಕಾರ
ಹೆಂಗಳೆಯರ ತೀರದ ಸಡಗರ
ಪಾನಕ ಕೋಸಂಬರಿ ಬಲು ಜೋರ

ನವರಾತ್ರಿ ಕಳೆದು ವಿಜಯದಶಮಿ ದಿನ
ಚಾಮುಂಡೇಶ್ವರಿಯ ಜಂಬೂ ಸವಾರಿ ದಿನ
ದೇಶ ವಿದೇಶ ಗಳಿಂದ ನೋಡ ಬರುವರು ಜನ
ದಸರೆಯು ಮಾಡುವುದು ಪುಳಕಿತ ಮೈಮನ

– ವೀಣಾ ಹೇಮಂತ್ ಗೌಡ ಪಾಟೀಲ್
ಮುಂಡರಗಿ, ಗದಗ್

### ಸೂರ್ಯ

ಬೆಳಗು ಜಾವದಲ್ಲಿ ಹೂವೊಂದು ಅರಳಲು
ಹುಟ್ಟಿ ಬರಲಿ ಸೂರ್ಯ
ನೆರಳಿನ ಬದುಕು ನೆರಳಾಗಿ ಇರಲು
ನಗುತಿರಲಿ ಹಾಗೆ ಹೂವು

ಕತ್ತಲು ಕಳೆದು ಬೆಳಕು ನೀಡಲು ಬೆಳಗೆದ್ದು
ಬರಲಿ ಸೂರ್ಯ ಮದ್ದಾನೇ ಸದ್ದು
ಹಿತ್ತಾಳೆ ಕಿವಿ ಸುಳಿದಿರಲಿ ನಮ್ಮ ಸುತ್ತ

ಚಿಂತೆಯ ತೊರೆದು ಸೊಗಸಾಗಿ ಬದುಕಲು
ಸಿಡಿದೆದ್ದು ಬರಲಿ ಮೌರ್ಯ
ತನ್ನೊಡಲ ಚೀಲ ತುಂಬಲು ತಾನೇ
ಕಾಯಕ್ಕೆ ಮುನ್ನುಗ್ಗಿ ಬರಲಿ ಈಗ

ದೀಪದ ಬೆಳಕು ಸೂರ್ಯನಂತೆ ಬೆಳಗಲು
ನಮ್ಮೊಳಗೆ ಇರಲಿ ಧೈರ್ಯ ಬೆಟ್ಟದಡಿಯ
ಹುಲ್ಲು ಬೆಟ್ಟದಷ್ಟೇ ಬೆಳೆಯಲು
ತನಗೊಂದು ಇರಲಿ ಕಾರ್ಯ

ಆಡುವ ಮಾತು ಹಿಡಿತಕ್ಕೆ ಸಿಕ್ಕು
ತೊಳಲಾಡದಿರಲಿ ಜೀವ
ಈ ಜಗವ ಮೆಟ್ಟಿ ಫಣತೆಯ ಎತ್ತಿ
ಮಿಡಿದು ಬರಲಿ ಎದೆಯ ಭಾವ

ಕಾರ್ಮೋಡದ ಮಳೆ ಕಡಲಿಗೆ ಸುರಿದು
ಅಮೃತವೇ ತುಂಬಿತು ಅಂದು ಇರುವಂತೆ
ಇದ್ದು ಮರವಾಗಿ ಬೆಳೆದು
ಫಲ ನೀಡಿತು ಹಲಸು ಇಂದು

ಒಂದೇ ಬಾನಿನಡಿ ಹಲವು ಹಕ್ಕಿಗಳು
ಒಂದಾಗಿ ಬಾಳಲಿ ಹಿಗ್ಗಿ
ರೆಕ್ಕೆಯ ಹಕ್ಕಿ ಮೇಲಕ್ಕೆ ಹತ್ತಿ ಹಿಗ್ಗಲಿ
ಹಾರುತಿರಲಿ ಸೂರ್ಯನ್ನೆ ತಲೆಯ ಕುಕ್ಕಿ

– ಜಿ. ಯರಿಸ್ವಾಮಿ ಸಂಕ್ಲಾಪುರ

## ಎಸ್ ಎಸ್ ಎಲ್ ಸಿ ಪ್ರಶ್ನೋತ್ತರಗಳ ಸರಣಿಗೆ ವಿದ್ಯಾರ್ಥಿಗಳ ಅನಿಸಿಕೆಗಳು

### ಕಲಿಕಾಸಕ್ತಿ ಹೆಚ್ಚಿಸಿದ ಹಂಪಿ ಟೈಮ್ಸ್



ನಾನು **ಹಂಪಿ ಟೈಮ್ಸ್** ನಲ್ಲಿ ಬರುವ ಪಠ್ಯಾಧರಿತ ಹಾಗೂ ಪಠ್ಯೇತರ ವಿಷಯಗಳನ್ನು ಪ್ರತಿದಿನ ಬೆಳಿಗ್ಗೆ ಓದುತ್ತಿದ್ದೇನೆ. 10 ನೇ ತರಗತಿ ಪರೀಕ್ಷೆಯಲ್ಲಿ ಉತ್ತಮ ಫಲಿತಾಂಶ ಪಡೆದುಕೊಳ್ಳುವ ನಂಬಿಕೆ ನನ್ನಲ್ಲಿ ಹೆಚ್ಚಾಗಿದೆ. ಎಸ್ಸೆಸ್ಸೆಲ್ಸಿ ಎಲ್ಲ ವಿಷಯಗಳ ಪ್ರಶ್ನೆ ಹಾಗೂ ಉತ್ತರಗಳನ್ನು ಪ್ರತಿದಿನ ಬರೆದಿಟ್ಟುಕೊಂಡು ಅಭ್ಯಾಸ ಮಾಡುತ್ತಾ ಇದ್ದೇನೆ. ವಿದ್ಯಾರ್ಥಿಗಳ ಶ್ರೇಯಸ್ಸಿಗಾಗಿ ಶ್ರಮಿಸುತ್ತಿರುವ ಹಂಪಿ ಟೈಮ್ಸ್ ಬಳಗಕ್ಕೂ, ಎಲ್ಲಾ ಮಾರ್ಗದರ್ಶಕ ಶಿಕ್ಷಕರಿಗೂ ನಾನು ಯಾವಾಗ್ಲೂ ಅಭಾರಿಯಾಗಿರುತ್ತೇನೆ.

**– ಟಿ. ಆರ್. ರಾಜಾನಾಯ್ಕ್, 10 ನೇ ತರಗತಿ**
ಸರಕಾರಿ ಪ್ರೌಢ ಶಾಲೆ ಬಸರಕೋಡು.

**ವಿದ್ಯಾರ್ಥಿಗಳು, ಪಾಲಕರು, ಶಿಕ್ಷಕರು ನಿಮ್ಮ ಅಭಿಪ್ರಾಯಗಳನ್ನು ಭಾವಚಿತ್ರದೊಂದಿಗೆ ಕಳುಹಿಸಬಹುದು.**
M: 9448633038 - Email: hampitimes@gmail.com

# ಬಾಲಕಿ ಮೇಲೆ ಅತ್ಯಾಚಾರ ಎಸಗಿದ ಆರೋಪಿಗೆ ಶಿಕ್ಷೆ

## 10 ವರ್ಷಗಳ ಜೈಲು ಶಿಕ್ಷೆ ಹಾಗೂ ರೂ. 20,000 ದಂಡ

### ಕೊಪ್ಪಳ ತ್ವರಿತ ವಿಲೇವಾರಿ ನ್ಯಾಯಾಧೀಶರಾದ(ಪೋಕ್ಸೊ) ಕುಮಾರ ಡಿ.ಕೆ ಅವರಿಂದ ತೀರ್ಪು

■ **ಹಂಪಿ ಟೈಮ್ಸ್ ಕೊಪ್ಪಳ**

ಅಪ್ರಾಪ್ತ ವಯಸ್ಸಿನ ಬಾಲಕಿಯನ್ನು ಅಪಹರಿಸಿ ಅತ್ಯಾಚಾರ ಎಸಗಿದ ಮಾರೆಪ್ಪ ಸೋಂಪುರ ಇತನ ಮೇಲಿನ ಆರೋಪ ಸಾಭಿತಾಗಿದೆ ಎಂದು ಕೊಪ್ಪಳ ಹೆಚ್ಚುವರಿ ಜಿಲ್ಲಾ ಹಾಗೂ ಸತ್ರ ನ್ಯಾಯಾಧೀಶರು ಹಾಗೂ ತ್ವರಿತ ವಿಲೇವಾರಿ ನ್ಯಾಯಾಲಯ(ಪೋಕ್ಸೊ)ವು ಆರೋಪಿಗೆ ಶಿಕ್ಷೆ ವಿಧಿಸಿದೆ.

2016ರ ಜನವರಿ 01ರಂದು ಕಾರಟಗಿ ಪೊಲೀಸ್ ಠಾಣೆ ವ್ಯಾಪ್ತಿಯ ಯರಡೋಣ ಗ್ರಾಮದ ಸರ್ಕಾರಿ ಶಾಲೆ ಹಿಂದೆ ಅಪ್ರಾಪ್ತ ವಯಸ್ಸಿನ ಬಾಲಕಿಯು

ಬಹಿರ್ದೆಸೆಗೆಂದು ಹೋದಾಗ ಆರೋಪಿ ಮಾರೆಪ್ಪ ಸೋಂಪುರ ಇತನು ಹಿಂಬಾಲಿಸಿ ಅವಳ ಇಚ್ಛೆಗೆ ವಿರುದ್ಧವಾಗಿ ಬಲವಂತದ ಅತ್ಯಾಚಾರ ಮಾಡಿದ್ದು, ನಂತರದಲ್ಲಿ ಅದೇ ಜಾಗದಲ್ಲಿ ಸುಮಾರು 7 ರಿಂದ 8 ಬಾರಿ ಬಾಲಕಿಗೆ ಬಲವಂತದ ಅತ್ಯಾಚಾರ ಮಾಡಿ, ಈ ವಿಷಯದ ಕುರಿತು ಯಾರ ಮುಂದೆ ಹೇಳಿದರೆ ಸಾಯಿಸುವುದಾಗಿ ಕೊಲೆ ಬೆದರಿಕೆ ಆರೋಪದ ಹಿನ್ನೆಲೆಯಲ್ಲಿ ಕಾರಟಗಿ ಪೊಲೀಸ್ ಠಾಣೆಯ ಪಿ.ಎಸ್.ಐ ಮಲ್ಲಪ್ಪ ಅವರು ಪ್ರಕರಣ ದಾಖಲಿಸಿಕೊಂಡು ಪ್ರಕರಣದ ತನಿಖೆಯನ್ನು ಪ್ರಭಾಕರ ಧರ್ಮಟ್ಟಿ, ಕಾಳಿ ಕೃಷ್ಣ ಹಾಗೂ ಗಂಗಾವತಿ ಗ್ರಾಮೀಣ ವೃತ್ತ ಪೊಲೀಸ್ ಅಧಿಕಾರಿಗಳಾದ ದೀಪಕ ಆರ್ ಬೂಸರೆಡ್ಡಿ ಅವರು ನಿರ್ವಹಿಸಿದ್ದರು. ತನಿಖೆಯಲ್ಲಿ ಆರೋಪಿತನ ಮೇಲಿನ ಆರೋಪಣೆಗಳು ಮೇಲ್ನೋಟಕ್ಕೆ ಸಾಭಿತಾಗಿದ್ದರಿಂದ ಆರೋಪಿತನ ವಿರುದ್ಧ ನ್ಯಾಯಾಲಯಕ್ಕೆ ದೋಷಾರೋಪಣ ಪಟ್ಟಿ ಸಲ್ಲಿಸಿದ್ದರು.


ಈ ಪ್ರಕರಣವು ಸ್ಪೇ.ಎಸ್‌ಸಿ(ಪೋಕ್ಸೊ) ಸಂ: 03/2017 ರಲ್ಲಿ ದಾಖಲಾಗಿದ್ದು, ವಿಚಾರಣೆಯನ್ನು ನಡೆಸಿದ ನ್ಯಾಯಾಲಯವು ಆರೋಪಿ ಮಾರೆಪ್ಪ ಸೋಂಪುರ ಇತನ ಮೇಲಿನ ಆರೋಪಣೆ ಗಳು ಸಾಭೀತಾಗಿವೆ ಎಂದು 10 ವರ್ಷಗಳ ಜೈಲು ಶಿಕ್ಷೆ ಹಾಗೂ ರೂ. 20,000 ಗಳ ದಂಡವನ್ನುಭರಿಸುವಂತೆ ಆದೇಶಿಸಿ, ಹೆಚ್ಚುವರಿ ಜಿಲ್ಲಾ ಹಾಗೂ ಸತ್ರ ನ್ಯಾಯಾಧೀಶರು ಹಾಗೂ ತ್ವರಿತ ವಿಲೇವಾರಿ ನ್ಯಾಯಾಧೀಶರಾದ(ಪೋಕ್ಸೊ) ಕುಮಾರ ಡಿ.ಕೆ ಅವರು 2024ರ ಸೆಪ್ಟೆಂಬರ್ 18ರಂದು ತೀರ್ಪು ಹೊರಡಿಸಿರುತ್ತಾರೆ. ಸರ್ಕಾರದ ಪರವಾಗಿ ವಿಶೇಷ ಸರ್ಕಾರಿ ಅಭಿಯೋಜಕರಾದ ಗೌರಮ್ಮದೇಸಾಯಿ ಅವರು ಈ ಪ್ರಕರಣ ನಡೆಸಿ ವಾದ ಮಂಡಿಸಿದ್ದರು. ಹಾಗೂ ವಿಚಾರಣಾ ಕಾಲಕ್ಕೆ ಪೋಲಿಸ್ ಸಿಬ್ಬಂದಿ ಅಕ್ಬರ್ ಸಮಯಕ್ಕೆ ಸರಿಯಾಗಿ ಸಾಕ್ಷಿದಾರರನ್ನು ಹಾಜರುಪಡಿಸಿ ಸಹಕರಿಸುತ್ತಾರೆ ಎಂದು ಹೆಚ್ಚುವರಿ ಜಿಲ್ಲಾ ಹಾಗೂ ಸತ್ರ ನ್ಯಾಯಾಲಯದ ವಿಶೇಷ ಸರ್ಕಾರಿ ಅಭಿಯೋಜಕರ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.

## SSLC ಈ ಬಾರಿ ಫಲಿತಾಂಶ ನಮ್ಮದೆ ಹೈ ಸ್ಕೋರ್‌ಗೆ ಈಗಿಂದಲೇ ಅಭ್ಯಾಸ ಮಾಡಿ

Hampi Times Margadarshi
ಮನಸ್ಸು ಮಾಡು – ಕರ್ತವ್ಯ ನಿಷ್ಠನಾಗು – ಕಾದು ನೋಡು
ಹಂಪಿ ಟೈಮ್ಸ್ ಇ–ಪೇಪರ್‌ಗಾಗಿ ಭೇಟಿ ನೀಡಿ: https://epaper.hampitimes.com

ಹಂಪಿ ಟೈಮ್ಸ್ ಮಾರ್ಗದರ್ಶಿ SSLC: ಗಣಿತ
www.hampitimes.com - Hampi Times Margadarshi

### ತ್ರಿಕೋನಮಿತಿಯ ಪ್ರಸ್ತಾವನೆ





sin θ = ಅಭಿಮುಖ ಬಾಹು / ವಿಕರ್ಣ
cos θ = ಪಾರ್ಶ್ವ ಬಾಹು / ವಿಕರ್ಣ
tan θ = ಅಭಿಮುಖ ಬಾಹು / ಪಾರ್ಶ್ವ ಬಾಹು
cot θ = ಪಾರ್ಶ್ವ ಬಾಹು / ಅಭಿಮುಖ ಬಾಹು
sec θ = ಪಾರ್ಶ್ವ ಬಾಹು / ವಿಕರ್ಣ
cosec θ = ಅಭಿಮುಖ ಬಾಹು / ವಿಕರ್ಣ

| ∠A | $0^0$ | $30^0$ | $45^0$ | $60^0$ | $90^0$ |
|---|---|---|---|---|---|
| sin | 0 | $\frac{1}{2}$ | $\frac{1}{\sqrt{2}}$ | $\frac{\sqrt{3}}{2}$ | 1 |
| cos | 1 | $\frac{\sqrt{3}}{2}$ | $\frac{1}{\sqrt{2}}$ | $\frac{1}{2}$ | 0 |
| tan | 0 | $\frac{1}{\sqrt{3}}$ | 1 | $\sqrt{3}$ | ND |
| cosec | ND | 2 | $\sqrt{2}$ | $\frac{2}{\sqrt{3}}$ | 1 |
| sec | 1 | $\frac{2}{\sqrt{3}}$ | $\sqrt{2}$ | 2 | ND |
| tan | ND | $\sqrt{3}$ | 1 | $\frac{1}{\sqrt{3}}$ | 0 |


1) ಕೊಟ್ಟಿರುವ ಚಿತ್ರದಲ್ಲಿ sinθ ಮತ್ತು $cos\alpha$ ಗಳ ಬೆಲೆಗಳನ್ನು ಕಂಡುಹಿಡಿಯಿರಿ

$$\sin\theta = \frac{\theta\text{ಗೆ ಅಭಿಮುಖ ಬಾಹು}}{\text{ವಿಕರ್ಣ}} = \frac{12}{13}$$

$$\cos\alpha = \frac{\alpha\text{ಗೆ ಪಾರ್ಶ್ವ ಬಾಹು}}{\text{ವಿಕರ್ಣ}} = \frac{12}{13}$$




2) ಚಿತ್ರದಲ್ಲಿ sin $\alpha$ ಮತ್ತು cos θ ಗಳ ಬೆಲೆಗಳನ್ನು ಕಂಡುಹಿಡಿಯಿರಿ




4) cos θ = $\frac{12}{13}$ ಆದರೆ sin θ ಮತ್ತು tan θ ದ ಬೆಲೆ ಕಂಡುಹಿಡಿಯಿರಿ.

5) 4 sin θ = 5 ಆದರೆ cosec θ ಮತ್ತು cotθ ದ ಬೆಲೆ ಕಂಡುಹಿಡಿಯಿರಿ.

### ನಿರ್ದಿಷ್ಟ ಕೋನಗಳ ಬೆಲೆಗಳು

1) $\sin 90^0 + \tan 45^0 = ?$

$1 + 1 = 2$

2) $\sin60^0 + \cos 30^0 = ?$

$\frac{\sqrt{3}}{2} + \frac{\sqrt{3}}{2} = \frac{2\sqrt{3}}{2} = \sqrt{3}$

3) $\tan 45^0 + \cot 45^0 = ?$

4) $\sin30^0 + \cos 60^0 = ?$

5) $\sin60^0 \cos30^0 + \sin 30^0 \cos60^0$

6) $\frac{\cos 45^0}{\sec 30^0 + cosec\ 30^0}$

7) $\frac{5\cos^2 60^0 + 4\sec^2 30^0 - \tan^2 45^0}{\sin^2 30^0 + \cos^2 30^0}$

### ತ್ರಿಕೋನಮಿತಿಯ ನಿತ್ಯ ಸಮೀಕರಣಗಳು

$sin^2A + cos^2A = 1$

$sec^2A - tan^2A = 1$

$cosec^2A - cot^2A = 1$

1) $9\,sec^2A - 9tan^2A = ?$ Ans : 1

2) (1+ tanθ + secθ)(1- cotθ - cosecθ)=?

ಮುಂದುವರೆಯುವುದು

ಮಾರ್ಗದರ್ಶಿ ಶಿಕ್ಷಕರು : **ಎಂ.ಎಸ್.ಮಂಜುನಾಥ,** ಶಿಕ್ಷಕರು, ಸರಕಾರಿ ಪ್ರೌಢಶಾಲೆ ಚಿಲುಗೋಡು ಹಗರಿಬೊಮ್ಮನಹಳ್ಳಿ (ತಾ) ವಿಜಯನಗರ (ಜಿಲ್ಲೆ)

ಸಹಕಾರ :–
ಸಾಯಿಮಣಿ ಪ್ರಕಾಶನ, ಹೊಸಪೇಟೆ

## ನಿತ್ಯ ಪಂಚಾಂಗ

ಮಾಸ: ಆಶ್ವೀಜ । ಸಂವತ್ಸರ: ಕ್ರೋಧಿ

**09–10–2024 – ಬುಧವಾರ**

| | |
|---|---|
| ತಿಥಿ | : ಷಷ್ಠಿ |
| ಪಕ್ಷ | : ಶುಕ್ಲ |
| ನಕ್ಷತ್ರ | : ಮೂಲ |
| ಯೋಗ | : ಸೌಭಾಗ್ಯ |
| ಕರಣ | : ತೈತುಲ |
| ಸೂರ್ಯೋದಯ | : 06:22:36 |
| ಸೂರ್ಯಾಸ್ತ | : 18:05:11 |
| ರಾಹು ಕಾಲ | : 12:14–13:42 |
| ಯಮಘಂಡ ಕಾಲ | : 07:50–09:18 |
| ಗುಳಿಕ ಕಾಲ | : 10:46–12:14 |

## ತುಂಗಭದ್ರಾ ನೀರಿನ ಮಟ್ಟ



ಮಂಗಳವಾರ : 08–10–2024

| | |
|---|---|
| ಗರಿಷ್ಠ ಮಟ್ಟ | 1633 ಅಡಿ |
| ಇಂದಿನ ಮಟ್ಟ | 1632.00 ಅಡಿ |
| ಒಳ ಹರಿವು | 11954 ಕ್ಯುಸೆಕ್ |
| ಹೊರ ಹರಿವು | 11654 ಕ್ಯುಸೆಕ್ |
| ಇಂದಿನ ಸಾಮರ್ಥ್ಯ | 101.773 ಟಿಎಂಸಿ |
| ಗರಿಷ್ಠ ಸಾಮರ್ಥ್ಯ | 105.788 ಟಿಎಂಸಿ |
| ಕಳೆದ ವರ್ಷ ಇದೇ ದಿನ | |
| ಇಂದಿನ ಮಟ್ಟ | 1616.28 ಅಡಿ |
| ಒಳ ಹರಿವು | 2235 ಕ್ಯುಸೆಕ್ |
| ಹೊರ ಹರಿವು | 9356 ಕ್ಯುಸೆಕ್ |
| ಸಾಮರ್ಥ್ಯ | 51.519 ಟಿಎಂಸಿ |

# ಬಳ್ಳಾರಿ-ಹೊಸಪೇಟೆ ರೈಲ್ವೆ ಅಭಿವೃದ್ಧಿ ಕಾಮಗಾರಿಗಳಿಗೆ 6,200 ಕೋಟಿ ರೂ. ವ್ಯಯ: ಸಚಿವ ವಿ.ಸೋಮಣ್ಣ

**ಬಳ್ಳಾರಿ–ಹೊಸಪೇಟೆ ಮಾರ್ಗದಲ್ಲಿ ನಾಲ್ಕು ಟ್ರ್ಯಾಕ್ ಹಳಿಯ ರೈಲ್ವೆ ಮಾರ್ಗ। ಸರ್ವೇ ಕಾರ್ಯ ಪೂರ್ಣ ಡಿಪಿಆರ್ ಸಿದ್ಧಗೊಳ್ಳುತ್ತಿದೆ.**

**ಕನಕದುರ್ಗಮ್ಮ ದೇವಸ್ಥಾನ ಬಳಿ ರೈಲ್ವೆ ಸೇತುವೆ ಕಾಮಗಾರಿಗೆ 9 ಕೋಟಿ ರೂ. ಕೊಟ್ಟರೂ ವಿಳಂಬವೇಕೆ ಎಂದ ಶಾಸಕ ನಾರಾ ಭರತ್ ರೆಡ್ಡಿ**



■ ಹಂಪಿ ಟೈಮ್ಸ್ ಬಳ್ಳಾರಿ

ಕಲ್ಯಾಣ ಕರ್ನಾಟಕ ವ್ಯಾಪ್ತಿಯ ಬಳ್ಳಾರಿ–ಹೊಸಪೇಟೆ ಭಾಗದಲ್ಲಿ ವಿವಿಧ ರೈಲ್ವೆ ಅಭಿವೃದ್ಧಿ ಕಾಮಗಾರಿಗಳಿಗೆ ಹೆಚ್ಚಿನ ಆದ್ಯತೆ ನೀಡಲಾಗುತ್ತಿದ್ದು, ಇದಕ್ಕಾಗಿ 6,200 ಕೋಟಿ ರೂ. ವ್ಯಯಿಸಲಾಗುತ್ತಿದೆ. ಈಗಾಗಲೇ ವಿವಿಧ ಯೋಜನೆಗಳ ಸರ್ವೇ ಕಾರ್ಯ ಪೂರ್ಣಗೊಳಿಸಲಾಗಿದ್ದು, ಅವುಗಳ ಡಿಪಿಆರ್ ಸಿದ್ಧಪಡಿಸಲಾಗುತ್ತಿದೆ ಎಂದು ಕೇಂದ್ರ ರೈಲ್ವೆ ಹಾಗೂ ಜಲಶಕ್ತಿ ರಾಜ್ಯ ಸಚಿವ ವಿ.ಸೋಮಣ್ಣ ಹೇಳಿದರು.

ಬಳ್ಳಾರಿ ಜಿಲ್ಲೆಯ ವಿವಿಧ ರೈಲ್ವೆ ಯೋಜನೆಗಳಿಗೆ ಸಂಬಂಧಿಸಿದಂತೆ ನೂತನ ಜಿಲ್ಲಾಡಳಿತ ಭವನದ ಕಚೇರಿ ಸಭಾಂಗಣದಲ್ಲಿ ರೈಲ್ವೆ ಇಲಾಖೆ ಅಧಿಕಾರಿಗಳು ಮತ್ತು ಕಂದಾಯ ಇಲಾಖೆ ಅಧಿಕಾರಿಗಳೊಂದಿಗೆ ನಡೆಸಿದ ಪ್ರಗತಿ ಪರಿಶೀಲನಾ ಸಭೆ ನಂತರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು.

ಬಳ್ಳಾರಿ–ಚಿಕ್ಕಜಾಜೂರು ಮಾರ್ಗದ 185 ಕಿ.ಮೀ ಉದ್ದದ ರೈಲ್ವೆ ಹಳಿ ಡಬ್ಲಿಂಗ್ ಕಾರ್ಯಕ್ಕೆ 3,080 ಕೋಟಿ ರೂ. ಖರ್ಚು ಮಾಡಲಾಗುತ್ತಿದ್ದು, ಪ್ರಸ್ತಕ ವರ್ಷದಲ್ಲಿ ಸರ್ವೇ ಕಾರ್ಯ ಪೂರ್ಣಗೊಂಡಿದ್ದು, ಇನ್ನೆರಡು ವರ್ಷದಲ್ಲಿ ಕಾಮಗಾರಿ ಪೂರ್ಣಗೊಳಿಸ ಲಾಗುವುದು. ಅದೇರೀತಿಯಾಗಿ ಸ್ವಾಮಿಹಳ್ಳಿ–ರಾಯದುರ್ಗ ಮಾರ್ಗದ 52 ಕಿ.ಮೀ ಉದ್ದದ ರೈಲ್ವೆ ಹಳಿ ಡಬ್ಲಿಂಗ್ ಕಾರ್ಯಕ್ಕೆ ತಾಂತ್ರಿಕ ಪರಿಶೀಲನೆ ನಡೆಸಲಾಗಿದೆ. ನಂತರ ಡಿಪಿಆರ್ ಸಿದ್ಧಪಡಿಸಲಾಗುವುದು ಎಂದು ತಿಳಿಸಿದರು.

ಬಳ್ಳಾರಿ–ಹೊಸಪೇಟೆ ಮಾರ್ಗದಲ್ಲಿ ನಾಲ್ಕು ಟ್ರ್ಯಾಕ್ ಹಳಿಯ ರೈಲ್ವೆ ಮಾರ್ಗ ನಿರ್ಮಾಣಕ್ಕೆ ಈಗಾಗಲೇ ಸರ್ವೇ ಕಾರ್ಯ ಪೂರ್ಣಗೊಂಡಿದ್ದು, ಡಿಪಿಆರ್ ಸಿದ್ಧಗೊಳ್ಳುತ್ತಿದೆ. ಈ ಭಾಗದ ವಿವಿಧ ಕಾರ್ಖಾನೆಗಳಿಗೆ ರೈಲ್ವೆ ಅಭಿವೃದ್ಧಿಗೆ ಸುಮಾರು 3 ಸಾವಿರ ಕೋಟಿ ರೂ. ವ್ಯಯಿಸಲಾಗುತ್ತದೆ. ವ್ಯಾಸನಕೆರೆ – ಅಮರಾವತಿ ಕಾಲೋನಿ ಮಾರ್ಗದ 20 ಕಿ.ಮೀ ಉದ್ದದ ರೈಲ್ವೆ ಹಳಿ ಡಬ್ಲಿಂಗ್ ಕಾರ್ಯ, ತೋರಣಗಲ್ಲು–ರಣಜಿತ್‌ಪುರ ಮಾರ್ಗದ 29 ಕಿ.ಮೀ ಉದ್ದದ ರೈಲ್ವೆ ಹಳಿ ಡಬ್ಲಿಂಗ್ ಕಾರ್ಯ ನಡೆಯುತ್ತಿದೆ ಎಂದು ಸಚಿವರು ತಿಳಿಸಿದರು.

ಅಮೃತ್ ಭಾರತ್ ರೈಲ್ವೆ ನಿಲ್ದಾಣ ಯೋಜನೆಯಡಿ ಬಳ್ಳಾರಿ ರೈಲ್ವೆ ನಿಲ್ದಾಣಕ್ಕೆ 16.66 ಕೋಟಿ ರೂ. ಮತ್ತು ಹೊಸಪೇಟೆ ರೈಲ್ವೆ ನಿಲ್ದಾಣಕ್ಕೆ 15.17 ಕೋಟಿ ರೂ. ಅನುದಾನದಲ್ಲಿ ನಿಲ್ದಾಣಗಳನ್ನು ಅಭಿವೃದ್ಧಿಗೊಳಿಸಲಾಗುತ್ತಿದೆ ಎಂದು ಹೇಳಿದರು.

ರಾಜ್ಯದಲ್ಲಿ ಒಟ್ಟು 21 ರೈಲ್ವೆ ಯೋಜನೆಗಳು ನಡೆಯುತ್ತಿದ್ದು, ಇದಕ್ಕಾಗಿ 43 ಸಾವಿರ ಕೋಟಿ ವೆಚ್ಚ ಮಾಡಲಾಗುತ್ತದೆ. ಈ ಎಲ್ಲಾ ಯೋಜನೆಗಳನ್ನು ಕಾಲಮಿತಿಯಲ್ಲಿ ಪೂರ್ಣ ಗೊಳಿಸಿ ರಾಜ್ಯವನ್ನು ರೈಲ್ವೆ ಸೌಕರ್ಯ ಹೊಂದಿದ ರಾಜ್ಯವನ್ನಾಗಿ ಮಾಡುವ ಗುರಿ ಹೊಂದಲಾಗಿದೆ ಎಂದು ತಿಳಿಸಿದರು.

ದೇಶದ 24 ರಾಜ್ಯಗಳ 303 ಜಿಲ್ಲೆಗಳಲ್ಲಿ 103 ವಂದೇ ಭಾರತ್ ರೈಲುಗಳು ಸಂಚರಿಸುತ್ತಿವೆ. ರಾಜ್ಯದಲ್ಲಿ 10 ವಂದೇ ಭಾರತ್ ಕಾರ್ಯಾಚರಣೆ ನಡೆಸುತ್ತಿವೆ. ವಂದೇ ಭಾರತ್ ರೈಲು ಬಡುವರು, ಮಧ್ಯಮ ವರ್ಗದವರಿಗೆ ತುರ್ತು ಪ್ರಯಾಣಕ್ಕಾಗಿ ಕೈಗೆಟಕುವ ದರದಲ್ಲಿ ಟಿಕೆಟ್ ಇದ್ದು, ನೀಡಲಾಗಿರುವ ಸೌಲಭ್ಯಗಳ ಬಗ್ಗೆ ಅರಿಯಲು ಪ್ರಯಾಣಿಸಬೇಕು ಎಂದು ತಿಳಿಸಿದ ಸಚಿವರು, ಕಳೆದ 10 ವರ್ಷಗಳಲ್ಲಿ ದೇಶಾದ್ಯಂತ 49 ಸಾವಿರ ಕಿ.ಮೀ ಉದ್ದದ ರೈಲ್ವೆ ಹಳಿ ಡಬ್ಲಿಂಗ್ ಕಾರ್ಯ ಮಾಡಲಾಗಿದೆ. ಶೇ.27 ರಷ್ಟು ಇದ್ದ ರೈಲ್ವೆ ಮಾರ್ಗಗಳ ವಿದ್ಯುದೀಕರಣವನ್ನು ಶೇ.98 ರಷ್ಟು ಪ್ರಗತಿ ಸಾಧಿಸಲಾಗಿದೆ ಎಂದರು.

ದೇಶದ ಎಲ್ಲ ಜಿಲ್ಲಾ ಕೇಂದ್ರಗಳ ರೈಲ್ವೆ ನಿಲ್ದಾಣಗಳನ್ನು ಏರ್‌ಪೋರ್ಟ್‌ಗಳ ಮಾದರಿಯಲ್ಲಿ ನವೀಕರಣಗೊಳಿಸಲಾಗುತ್ತಿದೆ. ಹಲವು ವರ್ಷಗಳಿಂದ ನೆನೆಗುದಿಗೆ ಬಿದ್ದಿದ್ದ ಕೇರಳ, ಕರ್ನಾಟಕ, ಗೋವಾ ಹಾಗೂ ಮಹಾರಾಷ್ಟ್ರ ರಾಜ್ಯಗಳಲ್ಲಿ ಹಾದುಹೋಗಿರುವ 741 ಕಿ.ಮೀ ಉದ್ದದ ಕೊಂಕಣ ರೈಲ್ವೆಯನ್ನು ರೈಲ್ವೆ ಇಲಾಖೆಯ ನೇರ ಆಡಳಿತಕ್ಕೆ ಒಳಪಡಿಸಲು ಮೂರು ರಾಜ್ಯಗಳು ತಾತ್ವಿಕ ಒಪ್ಪಿಗೆ ನೀಡಿದ್ದು, ಹಳಿಗಳ ಡಬ್ಲಿಂಗ್ ಮಾಡುವ ಕಾರ್ಯಕ್ಕೆ ರೈಲ್ವೆ ಖಾತೆ ಸಚಿವ ಅಶ್ವಿನ್ ವೈಷ್ಣವ್ ಅವರ ಜೊತೆ ಚರ್ಚಿಸಲಾಗಿದೆ ಎಂದರು.

ಅತೀ ಕಡಿಮೆ ಪ್ರಯಾಣದರದಲ್ಲಿ ಬಡವರು, ಸಣ್ಣ ಪುಟ್ಟ ವ್ಯಾಪಾರಿಗಳ ಅನುಕೂಲಕ್ಕಾಗಿ ಪ್ರಮುಖ ನಗರಗಳಿಗೆ ರೈಲು ಸಂಪರ್ಕ ಕಲ್ಪಿಸುವ ದೃಷ್ಟಿಯಿಂದ ಡೆಮೋ ರೈಲುಗಳನ್ನು ಓಡಿಸಲಾಗುತ್ತಿದೆ. ಮುಂದಿನ ದಿನಗಳಲ್ಲಿ ಎಲ್ಲಾ ಜಿಲ್ಲೆಗಳಲ್ಲಿ ಸಂಚರಿಸುವಂತೆ ಕ್ರಮ ವಹಿಸಲಾಗುವುದು ಎಂದರು.




ಬಳ್ಳಾರಿ ಸಂಸದ ಈ. ತುಕಾರಾಂ ಅವರು ಸಭೆಯಲ್ಲಿ ಮಾತನಾಡಿ, ಬಳ್ಳಾರಿ ನಗರದ ಎಸ್.ಎನ್.ಪೇಟೆ ರೈಲ್ವೆ ಕೆಳಸೇತುವೆ ಮಳೆ ನೀರು ಸಂಗ್ರಹಗೊಂಡು ಸಾರ್ವಜನಿಕರ ಸಂಚಾರಕ್ಕೆ ತೀವ್ರ ತೊಂದರೆ ಉಂಟಾಗುತ್ತಿದ್ದು, ರೈಲ್ವೆ ಕೆಳ ಸೇತುವೆಗಳ ಸಮಸ್ಯೆ ಪರಿಹರಿಸುವಂತೆ ಸಚಿವರ ಗಮನಕ್ಕೆ ತಂದರು. ಅದೇರೀತಿಯಾಗಿ ನಗರದ ಮೋತಿ ವೃತ್ತದ ಬಳಿಯ ರೈಲ್ವೆ ಮೇಲ್ಸೇತುವೆ ವಿಸ್ತರಣಾ ಕಾಮಗಾರಿ ಕೈಗೊಳ್ಳಬೇಕು. ಹೊಸಪೇಟೆಯ ಅನಂತಶಯನಗುಡಿ ಬಳಿಯ ಆರ್‌ಓಬಿ, ಸಿದ್ದಮ್ಮನಹಳ್ಳಿ ಬಳಿಯ ಆರ್‌ಓಬಿಗಳ ಸ್ಥಗಿತಗೊಂಡಿರುವ ಕಾಮಗಾರಿಗಳನ್ನು ಪುನಃ ಆರಂಭಿಸಬೇಕು ಎಂದು ಸಭೆಗೆ ತಿಳಿಸಿದರು.

### ಕನ್ನಡದಲ್ಲೆ ರೈಲ್ವೆ ಪರೀಕ್ಷೆ

ರೈಲ್ವೆ ಇಲಾಖೆಯಲ್ಲಿ ಒಟ್ಟು 12 ಲಕ್ಷ ಹುದ್ದೆಗಳಿದ್ದು, ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಅಧಿಸೂಚನೆ ಹೊರಡಿಸಲಾಗಿದೆ. ಈ ಪರೀಕ್ಷೆಯನ್ನು ಕನ್ನಡದಲ್ಲಿಯೇ ಬರೆಯಲು ಆದೇಶ ನೀಡಲಾಗಿದ್ದು, ನಮ್ಮ ರಾಜ್ಯದ ಯುವಕರು ಇದರ ಉಪಯೋಗ ಪಡೆದುಕೊಳ್ಳಬೇಕು, ಮುಂದಿನ ದಿನಗಳಲ್ಲಿಯೂ ಖಾಲಿ ಇರುವ ಹುದ್ದೆಗಳ ಭರ್ತಿ ಮಾಡಲಾಗುತ್ತದೆ.

– ವಿ.ಸೋಮಣ

ಕೇಂದ್ರ ರೈಲ್ವೆ ಹಾಗೂ ಜಲಶಕ್ತಿ ರಾಜ್ಯ ಸಚಿವ

ಇದಕ್ಕೆ ಪ್ರತಿಕ್ರಿಯಿಸಿದ ಕೇಂದ್ರ ರೈಲ್ವೆ ಹಾಗೂ ಜಲಶಕ್ತಿ ರಾಜ್ಯ ಸಚಿವ ವಿ.ಸೋಮಣ್ಣ ಅವರು, ರೈಲ್ವೆ ಅಧಿಕಾರಿಗಳು ಜಿಲ್ಲೆಯಲ್ಲಿ ಹಲವು ದಿನಗಳಿಂದ ನೆನೆಗುದಿಗೆ ಬಿದ್ದ ಆರ್‌ಓಬಿ ಕಾಮಗಾರಿಗಳನ್ನು ಸಂಬಂಧಿಸಿದ ಇಂಜಿನಿಯರ್ ಮೂಲಕ ಗುತ್ತಿಗೆದಾರರಿಗೆ ತಿಳಿಸಿ, ಕೂಡಲೇ ಪ್ರಾರಂಭಿಸಲು ಕ್ರಮವಹಿಸಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ಅವರು ಮಾತನಾಡಿ, ನಗರದ ಮಧ್ಯಭಾಗದ ಕನಕದುರ್ಗಮ್ಮ ದೇವಸ್ಥಾನ ಬಳಿಯ ರೈಲ್ವೆ ಸೇತುವೆ ವಿಸ್ತರಣಾ ಕಾಮಗಾರಿಗೆ ಈಗಾಗಲೇ ಬಳ್ಳಾರಿ ನಗರಾಭಿವೃದ್ಧಿ ಪ್ರಾಧಿಕಾರದಿಂದ 9 ಕೋಟಿ ರೂ. ಚೆಕ್ ಹಸ್ತಾಂತರಿಸಿದ್ದು, ಕಾಮಗಾರಿ ಆರಂಭಗೊಂಡಿಲ್ಲ ಎಂದು ಸಚಿವರ ಗಮನಕ್ಕೆ ತಂದರು. ಇದಕ್ಕೆ ಸಚಿವರು, ಸಂಬಂಧಿಸಿದ ಕಾರ್ಯಪಾಲಕ ಇಂಜಿನಿಯರ್ ಮೂಲಕ ಮಾಹಿತಿ ತರಿಸಿಕೊಳ್ಳುತ್ತೇನೆ ಎಂದು ಪ್ರತಿಕ್ರಿಯಿಸಿದರು.

ಸಭೆಯಲ್ಲಿ ಬಳ್ಳಾರಿ ಮಹಾನಗರ ಪಾಲಿಕೆಯ ಮೇಯರ್ ಮುಲ್ಲಂಗಿ ನಂದೀಶ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶರಣಪ್ಪ ಸಂಕನೂರ, ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್, ರೈಲ್ವೆ ಹಿರಿಯ ಅಧಿಕಾರಿ ಅಜಯ್ ಶರ್ಮಾ, ಹುಬ್ಬಳ್ಳಿಯ ಡಿಆರ್‌ಎಂ ಹರ್ಷ ಖಾರೆ, ಬಳ್ಳಾರಿ ವಿಭಾಗದ ಉಪಅರಣ್ಯ ಸಂರಕ್ಷಣಾಧಿಕಾರಿ ಸಂದೀಪ್ ಸೂರ್ಯವಂಶಿ, ಉಪವಿಭಾಗಾಧಿಕಾರಿ ಪ್ರಮೋದ್ ಹಾಗೂ ಕಂದಾಯ ಇಲಾಖೆ, ರೈಲ್ವೆ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

## ಮೈಕ್ರೋ ನ್ಯೂಸ್

### ಗಾಂಧಿ ಜಯಂತಿ ಖಾದಿ ವಸ್ತುಗಳ ಪ್ರದರ್ಶನ

**ಅಕ್ಟೋಬರ್ 9, 10 ರಂದು ಒಳಾಂಗಣ ಕ್ರೀಡಾಂಗಣದಲ್ಲಿ**

ಹಂಪಿ ಟೈಮ್ಸ್ ಹೊಸಪೇಟೆ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಪದವಿ ಪೂರ್ವ ಶಿಕ್ಷಣ ಇಲಾಖೆ, ಶಾಲಾ ಶಿಕ್ಷಣ ಇಲಾಖೆ, ನಗರಸಭೆ ಹಾಗೂ ಕೈಮಗ್ಗ ಮತ್ತು ಜವಳಿ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಮಹಾತ್ಮ ಗಾಂಧೀಜಿಯವರ 155ನೇ ಜಯಂತಿ ಅಂಗವಾಗಿ ಅಕ್ಟೋಬರ್ 9 ಮತ್ತು ಅಕ್ಟೋಬರ್ 10ರಂದು ಎರಡು ದಿನಗಳ ಕಾಲ ಬೆಳಗ್ಗೆ 10 ರಿಂದ ಸಂಜೆ 5.30ರವರೆಗೆ ಹೊಸಪೇಟೆಯ ನಗರದ ಜಿಲ್ಲಾ ಒಳಾಂಗಣ ಕ್ರೀಡಾಂಗಣದ ಆವರಣದಲ್ಲಿ ಖಾದಿ ವಸ್ತುಗಳ ಪ್ರದರ್ಶನ ಮತ್ತು ಮಾರಾಟದ ವ್ಯವಸ್ಥೆ ಕಲ್ಪಿಸಲಾಗಿದೆ. ಸಾರ್ವಜನಿಕರು ಇದರ ಪ್ರಯೋಜನೆ ಪಡೆಯಬೇಕು ಎಂದು ಜಿಲ್ಲಾ ವಾರ್ತಾಧಿಕಾರಿಗಳು ಮತ್ತು ಖಾದಿ ಗ್ರಾಮೋದ್ಯೋಗ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ವಿವಿಧ ಯೋಜನೆಗಳ ಸೌಲಭ್ಯಕ್ಕಾಗಿ ಅರ್ಜಿ ಆಹ್ವಾನ

ಮೊದಲ ಪುಟದಿಂದ

ಲೆದರ್ ಅಂಡ್ ಫ್ಯಾಷನ್ ಟೆಕ್ನಾಲಜಿ (ಎಸ್.ಎಸ್.ಎಲ್.ಸಿ.ಉತ್ತೀರ್ಣರಾಗಿರಬೇಕು), ಸ್ವಾವಲಂಭಿ ಸಂಚಾರಿ ಮಾರಾಟ ಮಳಿಗೆ, ನೇರ ಸಾಲ, ಚರ್ಮ ಶಿಲ್ಪಿ, ಮಹಿಳಾ ಕುಶಲಕರ್ಮಿಗಳಿಗೆ ಕಾಯಕ ಸ್ಫೂರ್ತಿ, ಪಾದುಕೆ ಕುಟೀರ, ಮಾರುಕಟ್ಟೆ ಸಹಾಯಧನ, ಡಾ॥ ಬಾಬು ಜಗಜೀವನ ರಾಂ ಚರ್ಮಕಾರರ ವಸತಿ ಯೋಜನೆಗಳಿಗೆ ಅರ್ಜಿ ಸಲ್ಲಿಸಬಹುದು. ಅರ್ಜಿಯನ್ನು ನಿಗಮದ ವೆಬ್‌ಸೈಟ್ https://suvidha.karnataka.gov.in ನಲ್ಲಿ ಅರ್ಜಿ ಸಲ್ಲಿಸಿ ಸಲ್ಲಿಸಿದ ಅರ್ಜಿಯ ಪ್ರತಿಯನ್ನು ಜಿಲ್ಲಾ ಕಚೇರಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ದೂ.ಸಂ: 08392–271741ಗೆ ಸಂಪರ್ಕಿಸಬಹುದು ಎಂದು ಲಿಡಕರ್‌ನ ಜಿಲ್ಲಾ ಸಂಯೋಜಕರು ತಿಳಿಸಿದ್ದಾರೆ.




# ಕಲ್ಯಾಣ ಕರ್ನಾಟಕದ ಸಾಹಿತಿಗಳು ಬರಹಗಾರರನ್ನ ಸರ್ಕಾರ ಪರಿಗಣಿಸಲಿ

**ಸಿರಿಗನ್ನಡ ವೇದಿಕೆ ಜಿಲ್ಲಾಧ್ಯಕ್ಷ ಕೆ.ಎಂ.ಬಸವರಾಜ ಆಗ್ರಹ**



■ ಹಂಪಿ ಟೈಮ್ಸ್ ಹೊಸಪೇಟೆ

ರಾಜ್ಯ ಸರ್ಕಾರ ಕಲ್ಯಾಣ ಕರ್ನಾಟಕದಲ್ಲಿ ಅತ್ಯಂತ ಹಿಂದುಳಿದ ಜಿಲ್ಲೆಗಳ ಸಾಹಿತಿಗಳನ್ನು ಬರಹಗಾರರನ್ನು ಗುರುತಿಸಬೇಕಾಗಿದೆ. ರಾಜ್ಯೋತ್ಸವ ಪ್ರಶಸ್ತಿಗಳು ಮತ್ತು ವಿವಿಧ ಅಕಾಡೆಮಿಗಳಿಗೆ, ವಿಶ್ವವಿದ್ಯಾಲಯಗಳಿಗೆ, ನಾಮ ನಿರ್ದೇಶನ ಮಾಡುವಾಗ, ಗೌರವ ಡಾಕ್ಟರೇಟ್ ಪದವಿ ಪ್ರಧಾನ ಮಾಡುವಾಗ ಸ್ಥಳೀಯ ಸಾಹಿತಿಗಳನ್ನು ಪರಿಗಣಿಸಬೇಕು ಎಂದು ಸಿರಿಗನ್ನಡ ವೇದಿಕೆ ಅಧ್ಯಕ್ಷ ಕೆ.ಎಂ.ಬಸವರಾಜ ಒತ್ತಾಯಿಸಿದರು.

ನಗರದ ಶ್ರೀ ಕೊಟ್ಟೂರು ಸಂಸ್ಥಾನ ಮಠದಲ್ಲಿ ವೇದಿಕೆಯಿಂದ ಹಮ್ಮಿಕೊಂಡಿದ್ದ ವಿಜಯನಗರ ಜಿಲ್ಲಾ ಘಟಕ ಉದ್ಘಾಟನೆ, ಸದಸ್ಯರ ಪದಗ್ರಹಣ, ಸಾಂಸ್ಕೃತಿಕ ಕಾರ್ಯಕ್ರಮ, ಎಸ್ ಎಸ್ ಎಲ್ ಸಿ ಪರೀಕ್ಷೆಯಲ್ಲಿ ಕನ್ನಡ ವಿಷಯದಲ್ಲಿ 125ಕ್ಕೆ 125 ಅಂಕ ಪಡೆದ ವಿದ್ಯಾರ್ಥಿಗಳಿಗೆ ಸನ್ಮಾನ ಸಮಾರಂಭ ಕೃತಿ ಬಿಡುಗಡೆ ಕಾರ್ಯಕ್ರಮದ ಅಧ್ಯಕ್ಷತೆವಹಿಸಿಭಾನುವಾರಮಾತನಾಡಿದರು. ಸಿರಿಗನ್ನಡ ವೇದಿಕೆಯು ಕರ್ನಾಟಕ ರಾಜ್ಯದಲ್ಲಿ ಬಹುತೇಕ ಎಲ್ಲಾ ಜಿಲ್ಲೆಗಳಲ್ಲೂ ತನ್ನ ಕಾರ್ಯ ಚಟುವಟಿಕೆಗಳನ್ನು ಆರಂಭಿಸಿದೆ. ಈಗ ನೂತನವಾಗಿ ವಿಜಯನಗರ ಜಿಲ್ಲಾ ಘಟಕ ಉದ್ಘಾಟನೆಗೊಳ್ಳುತ್ತಿದೆ. ಸಿರಿಗನ್ನಡ ವೇದಿಕೆಯು ಕನ್ನಡ ನಾಡು ನುಡಿ ಭಾಷೆ ಮತ್ತು ಸಾಂಸ್ಕೃತಿಕ ಪರಂಪರೆಯನ್ನು ಜಾಗೃತಗೊಳಿಸುವ ನಿಟ್ಟಿನಲ್ಲಿ ಕೆಲಸ ಮಾಡುತ್ತದೆ. ಶಾಲೆ ಕಾಲೇಜು ಮತ್ತು ಸಾರ್ವಜನಿಕರಲ್ಲಿ ಕನ್ನಡದ ಬಗ್ಗೆ ಅಭಿಮಾನ ಮೂಡಿಸುವ ಹೊಣೆಗಾರಿಕೆಯಿಂದ ಕೆಲಸವನ್ನು ಮಾಡುತ್ತಿದೆ ಎಂದರು.

ಕೆ.ಎಂ.ಬಸವರಾಜ ವೀರಚಿತ ತಾಯಿ ತುಂಗಭದ್ರಾ ಕವನ ಸಂಕಲನವನ್ನು ಹಂಪಿ ವಿಶ್ವವಿದ್ಯಾಲಯ ವಿಶ್ರಾಂತ ಪ್ರಾಧ್ಯಾಪಕ ಕೆ ರವೀಂದ್ರನಾಥ್ ಲೋಕಾರ್ಪಣೆ ಮಾಡಿದರು. ಅಂತರಂಗದ ಮೃದಂಗ ಕವನ ಸಂಕಲನವನ ನಿವೃತ್ತ ಪ್ರಾಧ್ಯಾಪಕ ಹೆಚ್.ಎಂ. ಚಂದ್ರಶೇಖರ ಶಾಸ್ತ್ರಿ ಲೋಕಾರ್ಪಣೆ ಮಾಡಿದರು. ಎಸ್ ಎಸ್ ಮುದ್ಲಾಪುರ ಇವರ ಕವನ ಪುಷ್ಪಾಂಜಲಿ ಕವನ ಸಂಕಲನವನ್ನು ಸಿರಿಗನ್ನಡ ವೇದಿಕೆ ರಾಜ್ಯ ಘಟಕದ ಗೌರವಧ್ಯಕ್ಷ ಡಾ.ಎಂ. ಆರ್.ನಾಗರಾಜರಾವ್ ಬಿಡುಗಡೆಗೊಳಿಸಿದರು.

ಸಿರಿಗನ್ನಡ ವೇದಿಕೆ ರಾಜ್ಯಧ್ಯಕ್ಷ ಜಿ ಎಸ್ ಗೋನಾಳ, ಗೌರವಧ್ಯಕ್ಷ ಎಂ ಆರ್ ನಾಗರಾಜ ರಾವ್, ವಿಜಯನಗರ ಜಿಲ್ಲಾ ಘಟಕ, ಗೌರವ ಅಧ್ಯಕ್ಷ ಟಿ ಯಮನಪ್ಪ, ಖಜಾಂಚಿ ಎಲ್ ಹಾಲ್ಯಾನಾಯ್ಕ ಹಾಗು ಪದಾಧಿಕಾರಿಗಳು, ಅಖಿಲ ಭಾರತ ಸಾಹಿತ್ಯ ಪರಿಷದ್, ತಾಲೂಕು ಸಮಿತಿ ಅಧ್ಯಕ್ಷ ಎಂ.ಎಂ.ವಿರೂಪಾಕ್ಷಯ್ಯ, ದಲಿತ ಸಾಹಿತ್ಯ ಪರಿಷತ್ ವಿಜಯನಗರ ಜಿಲ್ಲಾಧ್ಯಕ್ಷ ದಯಾನಂದ ಕಿನ್ನಾಳ, ವಿಜಯನಗರ ಕಾಲೇಜ್ ಅಧ್ಯಕ್ಷ ಮಲ್ಲಿಕಾರ್ಜುನ ಮೆಟ್ರಿ, ವಿಜಯನಗರ ಸಾಹಿತ್ಯ ಪರಿಷತ್ ಅಧ್ಯಕ್ಷ ಮಧುರಚನ್ನಶಾಸ್ತ್ರಿ, ಲೇಖಕರಾದ ಚಂದ್ರಶೇಖರ ರೋಣದಮಠ, ನೂರ್ ಜಹಾನ್, ವಿಜಯನಗರ ಕರ್ನಾಟಕ ಸರ್ಕಾರ ನಿವೃತ್ತಿ ನೌಕರರ ಸಂಘದ ಅಧ್ಯಕ್ಷ ರಾಮಪ್ಪ ಸೇರಿದಂತೆ ಇತರರು ಭಾಗವಹಿಸಿದ್ದರು.

ಎಸ್ಸೆಸ್ಸೆಲ್ಸಿಯ ಕನ್ನಡ ಭಾಷೆಯಲ್ಲಿ 125 ಅಂಕಗಳಿಸಿದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಇದೇ ಸಂದರ್ಭದಲ್ಲಿ ಸನ್ಮಾನಿಸಿದರು.




Printed by: MANJUNATHA .H .B Published by: A. SHUBHA. Owned by: A. SHUBHA and Printed at : AMRITH PRINTERS, No. 63/A, Opp. Police Station, Ramanagara, Hagaribommanahalli – 583212, Vijayanagara Dist., Karnataka. Published at : At Ward No.15, Near Bannimahankali Temple, 3rd Cross, New Amaravathi, Hospet - 583201, Vijayanagara Dist., Karnataka. Editor : BASAPUR BASAVARAJA, PRGI No:KARKAN/2023/88055